ಜನಮನದ ದನಿ

# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ



ಪರಿಸರ ಸಂರಕ್ಷಣೆ, ಜಲಮೂಲಗಳ ರಕ್ಷಣೆ ಹಾಗೂ ಸಾರ್ವಜನಿಕ ಆರೋಗ್ಯದ ಹಿತದೃಷ್ಟಿಯಿಂದ ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿಒಪಿ) ಹಾಗೂ ರಾಸಾಯನಿಕ ಬಣ್ಣಗಳಿಂದ ತಯಾರಿಸಿದ ಗಣೇಶ ಮೂರ್ತಿಗಳ ತಯಾರಿಕೆ, ದಾಸ್ತಾನು, ಸಾಗಣೆ, ಮಾರಾಟ ಮತ್ತು ವಿಸರ್ಜನೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ ಎಂದು ಬೆಂಗಳೂರು ಆಯುಕ್ತ ಡಿ.ಎಸ್.ರಮೇಶ್ ತಿಳಿಸಿದ್ದಾರೆ.

29 ಆಗಸ್ಟ್, 2026 ಶನಿವಾರ ಬೆಲೆ ₹ 2.00 ಸಂಪುಟ : 20 ಸಂಚಿಕೆ -167 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629


ಎಐ ಕಂಪನಿಗಳ ಪುಸ್ತಕ ದ್ರೋಹ! » 2


ಜ್ಞಾನದ ಮಾರ್ಗ ತೋರಿಸಿದ ನಾರಾಯಣ ಗುರು » 3


ಮಹನೀಯರ ತತ್ವಾದರ್ಶ ಸ್ವಸ್ಥ ಸಮಾಜಕ್ಕೆ ಅಡಿಪಾಯ » 4

# ಸಚಿವ ಸ್ಥಾನಕ್ಕೆ ನಾಗೇಂದ್ರ ರಾಜೀನಾಮೆ

## ವಿಪಕ್ಷದಿಂದ ಕುತಂತ್ರ ರಾಜಕಾರಣವೆಂದು ಕಣ್ಣೀರು | ಬಿಜೆಪಿ ಹೋರಾಟಕ್ಕೆ ಕೊನೆಗೂ ಮಣಿದ ಸರ್ಕಾರ

• ಪ್ರಜೋದಯ ವರದಿ

**ಬೆಂಗಳೂರು:** ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಕೋಟ್ಯಾಂತರ ರೂ. ದುರುಪಯೋಗದ ಆರೋಪ ಎದುರಿಸುತ್ತಿರುವ ಬಿ.ನಾಗೇಂದ್ರ ಅವರು ಶುಕ್ರವಾರ ಕೊನೆಗೂ ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಇದರೊಂದಿಗೆ ನಾಗೇಂದ್ರ ರಾಜೀನಾಮೆಗೆ ಆಗ್ರಹಿಸಿ ಸದನದ ಒಳಗೆ ಮತ್ತು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಪ್ರತಿಭಟನೆ ನಡೆಸಿದ್ದ ಬಿಜೆಪಿ ಹೋರಾಟಕ್ಕೆ ಜಯ ಸಿಕ್ಕಂತಾಗಿದೆ.

ಬಿ.ನಾಗೇಂದ್ರ ಅವರು ದೆಹಲಿಯಿಂದ ಆಗಮಿಸಿದ ಬಳಿಕ ಸಂಜೆ ವಿಧಾನಸೌಧದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿ, ಮನುವಾದಿಗಳ ಕುತಂತ್ರದಿಂದ ನಾನು ಮೂರು ತಿಂಗಳು ಜೈಲಿಗೆ ಹೋಗಿದ್ದೆ. ಪಕ್ಷಕ್ಕೆ ಮುಜುಗರ ಆಗಬಾರದೆಂದು ಸ್ವಇಚ್ಛೆಯಿಂದ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡುತ್ತಿದ್ದೇನೆಂದು ಭಾವುಕರಾಗಿ ಕಣ್ಣೀರು ಹಾಕಿದರು.

ವಿರೋಧ ಪಕ್ಷದವರಿಂದ ಕುತಂತ್ರ ರಾಜಕಾರಣ ನಡೆಯುತ್ತಿದೆ. ಸದನದಲ್ಲಿ ಹಲವು ಬಾರಿ ಮನವಿ ಮಾಡಿಕೊಂಡೆವು, ನೋಟೀಸ್ ಕೊಡಿ, ಚರ್ಚೆಗೆ ಬನ್ನಿ ಎಂದು ಕೇಳಿಕೊಂಡೆವು, ಆದರೂ ಅವರು ಚರ್ಚೆಗೆ ಬರಲಿಲ್ಲ. ಈಗ ಪಾದಯಾತ್ರೆಗೆ ಹೊರಟಿದ್ದಾರೆ. ಬಿಜೆಪಿಯವರು ಮನುಸ್ಮೃತಿ ವಾದ ಮಾಡುತ್ತಿದ್ದು, ಸಂವಿಧಾನ ನಮಗೆಲ್ಲಾ ರಕ್ಷಣೆ



ಮಾಡುತ್ತದೆಂಬ ನಂಬಿಕೆ ಇದೆ ಎಂದು ವಾಗ್ದಾಳಿ ನಡೆಸಿದರು.

ನಾನು ದಲಿತ ಎನ್ನುವ ಕಾರಣಕ್ಕೆ ನನ್ನನ್ನು ಟಾರ್ಗೆಟ್ ಮಾಡಲಾಗುತ್ತಿದೆ. ದಲಿತರು, ಬಡವರು ಹಾಗು ಆದಿವಾಸಿಗಳು ಬದುಕಬಾರದೆಂಬ ಮನಸ್ಥಿತಿಯನ್ನು ಬಿಜೆಪಿಗರು ಹೊಂದಿದ್ದಾರೆ. 2024ರಲ್ಲಿ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದೆ. ವಿನಾಕಾರಣ ನನ್ನನ್ನು ಬಂಧಿಸಿ ಮೂರು ತಿಂಗಳು ಜೈಲಿಗೆ ಹಾಕಿದರೆಂದು ತಿಳಿಸಿದರು.

**ಒಂದೇ ಹಗರಣಕ್ಕೆ ಎರಡು ಬಾರಿ ರಾಜೀನಾಮೆ**

ಹಿಂದೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸಚಿವ ಸಂಪುಟದಲ್ಲಿ ಸಚಿವರಾಗಿದ್ದ ಬಿ. ನಾಗೇಂದ್ರ ಅವರು ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಹಗರಣ ಸಂಬಂಧ ಜೂನ್ 6, 2024ರಂದು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ಬಳಿಕ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಸಚಿವ ಸಂಪುಟದಲ್ಲಿ ಮತ್ತೆ ಸಚಿವರಾಗಿ ಆಗಸ್ಟ್ 3, 2026ರಂದು ಪ್ರಮಾಣವಚನ ಸ್ವೀಕರಿಸಿದ್ದರು. ಇದಕ್ಕೆ ಪ್ರತಿಪಕ್ಷಗಳು ತೀವ್ರ ವಿರೋಧ ವ್ಯಕ್ತಪಡಿಸಿದ್ದವು ಮತ್ತು ನಾಗೇಂದ್ರ ರಾಜೀನಾಮೆಗೆ ಪಟ್ಟು ಹಿಡಿದಿದ್ದವು. ಹೀಗಾಗಿ ನಾಗೇಂದ್ರ ಅವರು ಇಂದು ರಾಜೀನಾಮೆ ನೀಡಿದ್ದಾರೆ. ಒಂದೇ ಹಗರಣದಲ್ಲಿ 2 ಬಾರಿ ಸಚಿವ ಸ್ಥಾನ ಕಳೆದುಕೊಂಡಂತಾಗಿದೆ.

**ಏನಿದು ಹಗರಣ?**

ರಾಜ್ಯದ ಪರಿಶಿಷ್ಟ ಪಂಗಡಗಳ ಕಲ್ಯಾಣಕ್ಕಾಗಿ ಮೀಸಲಿಟ್ಟಿದ್ದ ಕೋಟ್ಯಾಂತರ ರೂಪಾಯಿ ಸಾರ್ವಜನಿಕ ಹಣವನ್ನು ಕಾನೂನುಬಾಹಿರವಾಗಿ ದುರ್ಬಳಕೆ ಮಾಡಿಕೊಂಡಿರುವ ಭಾರೀ ಆರ್ಥಿಕ ವಂಚನೆ ಪ್ರಕರಣವಾಗಿದೆ. ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಲೆಕ್ಕ ಅಧೀಕ್ಷಕರಾಗಿದ್ದ ಚಂದ್ರಶೇಖರನ್ ಅವರು ಮೇ 2024ರಲ್ಲಿ ಶಿವಮೊಗ್ಗಾದ ತಮ್ಮ ನಿವಾಸದಲ್ಲಿ ಆತ್ಮಹತ್ಯೆ ಮಾಡಿಕೊಂಡಾಗ ಈ ಹಗರಣ ಅಧಿಕೃತವಾಗಿ ಬಯಲಾಗಿತ್ತು. ನಿಗಮದ ಒಟ್ಟು 187 ಕೋಟಿ ರೂ. ಅನುದಾನದಲ್ಲಿ ಸುಮಾರು 88 ರಿಂದ 89.6 ಕೋಟಿ ರೂ. ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾದ ಎಂ.ಜಿ.ರಸ್ತೆ ಶಾಖೆಯಿಂದ ನಕಲಿ ದಾಖಲೆಗಳು ಮತ್ತು ಸಹಿಗಳನ್ನು ಬಳಸಿ ಅನಧಿಕೃತ ಖಾತೆಗಳಿಗೆ ವರ್ಗಾಯಿಸಿರೋದು ಪತ್ತೆಯಾಗಿಯತ್ತು.

### ಹೋರಾಟಕ್ಕೆ ಮಣಿದ ಸರ್ಕಾರ: ಅಶೋಕ್

187 ಕೋಟಿ ಲೂಟಿ ಮಾಡಿದ ಬಿ.ನಾಗೇಂದ್ರ ಅವರನ್ನು ರಕ್ಷಿಸಲು ವಿಧಾನಮಂಡಲ ಅಧಿವೇಶನವನ್ನೇ ರದ್ದು ಮಾಡಿದ ಕಾಂಗ್ರೆಸ್ ಸರ್ಕಾರ, ಕೊನೆಗೂ ನಮ್ಮ ಹೋರಾಟಕ್ಕೆ ಮಣಿದು ರಾಜೀನಾಮೆ ಪಡೆದಿದೆ. ಬಿಜೆಪಿಯಿಂದ ಪಾದಯಾತ್ರೆ ಘೋಷಣೆ ಮಾಡಿದ ಕೂಡಲೇ ಬೆವರಿ ಬೆದರಿದ ಕಾಂಗ್ರೆಸ್ ರಾಜೀನಾಮೆ ಪಡೆದು ಅಲ್ಪಸ್ವಲ್ಪ ಮಾನ ಉಳಿಸಿಕೊಂಡಿದೆಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಹೇಳಿದ್ದಾರೆ.

### ಚುನಾವಣಾ ಅಖಾಡಕ್ಕೆ ಬರಲು ಸವಾಲು

ನನ್ನ ಶಾಸಕ ಸ್ಥಾನಕ್ಕೂ ರಾಜೀನಾಮೆ ನೀಡುತ್ತೇನೆ. ಬನ್ನಿ ಜನತಾ ನ್ಯಾಯಾಲಯಕ್ಕೆ ಹೋಗೋಣ. ತಾಕತ್ತಿದ್ದರೆ ಚುನಾವಣಾ ಅಖಾಡದಲ್ಲಿ ಎದುರಿಸಿ ಎಂದು ನಾಗೇಂದ್ರ ಅವರು ಬಿಜೆಪಿಗೆ ಬಹಿರಂಗ ಸವಾಲು ಹಾಕಿದ್ದಾರೆ. ಇಡಿ, ಸಿಬಿಐ ಬಿಟ್ಟು ಕೇಸ್ ಹಾಕಿಸ್ತಾರೆ, ನಿಮ್ಮ ಗೊಡ್ಡು ಬೆದರಿಕೆಗಳಿಗೆ ಹೆದರಲ್ಲ. ಜನಾರ್ಧನ ರೆಡ್ಡಿ, ಶ್ರೀರಾಮುಲು ಬರಲಿ, ಜನತಾ ನ್ಯಾಯಾಲಯಕ್ಕೆ ಹೋಗೋಣ. ಬಳ್ಳಾರಿಯಲ್ಲಿ ನೀವು ರಿಜೆಕ್ಟ್ ಪೀಸ್‌ಗಳು, ಚಲಾವಣೆ ಇಲ್ಲದ ನಾಣ್ಯಗಳು ಎಂದು ವಾಗ್ದಾಳಿ ನಡೆಸಿದ್ದಾರೆ.

# ಜಾನಪದ ನಮ್ಮ ತಾಯಿ ಪರಂಪರೆ: ಶಂಭುನಾಥ ಶ್ರೀ

## ಆದಿಚುಂಚನಗಿರಿ ಮಠದಲ್ಲಿ 144ನೇ ಹುಣ್ಣಿಮೆ ಕಾರ್ಯಕ್ರಮ

• ಪ್ರಜೋದಯ ವರದಿ

**ಹಾಸನ:** ನಮ್ಮ ನಾಡಿನ ಶ್ರೇಷ್ಠ ಹಾಗು ತಾಯಿ ಪರಂಪರೆಯಾದ ಜಾನಪದವು ನಮ್ಮ ಸಾಂಸ್ಕೃತಿಕ ಶ್ರೀಮಂತಿಕೆಯನ್ನು ಪ್ರತಿಬಿಂಬಿಸುತ್ತದೆಂದು ಆದಿಚುಂಚನಗಿರಿ ಹಾಸನ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ ಹೇಳಿದರು.

ನಗರದ ಆದಿಚುಂಚನಗಿರಿ ಶಾಖಾ ಮಠದಲ್ಲಿ ಶುಕ್ರವಾರ ನಡೆದ ಗುರು ತೋರಿದ ದಾರಿ, ತಿಂಗಳ ಮಾಮನ ತೇರು 144ನೇ ಹುಣ್ಣಿಮೆ ಕಾರ್ಯಕ್ರಮ ಹಾಗೂ ಜಾನಪದ ಗಾಯಕಿ ಸವಿತಕ್ಕ ಅವರ ಜನಪದ ಜಗತ್ತು ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದರು.

ನಾವು ಯಾರನ್ನೇ ಮರೆತರೂ ಜನ್ಮ ನೀಡಿದ ತಾಯಿ-ತಂದೆಯನ್ನು ಮರೆಯಲು ಸಾಧ್ಯವಿಲ್ಲ. ಇಂದಿನ ನೂಲಿನ ಹುಣ್ಣಿಮೆಗೆ ವಿಶೇಷ ಅರ್ಥವಿದೆ. ಮಹಾಭಾರತದಲ್ಲಿ ಶ್ರೀಕೃಷ್ಣನ ಕೈಗೆ ಗಾಯವಾದಾಗ ದ್ರೌಪದಿ ತನ್ನ ಸೀರೆಯ ತುಂಡನ್ನು ಹರಿದು ಕಟ್ಟಿದಳು. ಸಹೋದರ-ಸಹೋದರಿಯರ ನಡುವಿನ ಪ್ರೀತಿ ಮತ್ತು ರಕ್ಷಣೆಯ ಸಂಕೇತವಾಗಿ ಈ ಪರಂಪರೆ ಬೆಳೆದು ಬಂದಿದೆ. ಇಂತಹ ಶ್ರೇಷ್ಠ ಸಂಸ್ಕೃತಿ



ನಮ್ಮದು ಎಂದರು.

ಜಾನಪದವು ನಮ್ಮ ನಿತ್ಯ ಜೀವನದಲ್ಲಿ ಹಾಸುಹೊಕ್ಕಾಗಿದೆ. ಅದು ಮಮತೆಯನ್ನು ಕರುಣಿಸಿ ದುಃಖವನ್ನು ದೂರ ಮಾಡುತ್ತದೆ. ನಮ್ಮೊಳಗಿರುವ ಜ್ಞಾನಕ್ಕೆ ಬೆಲೆ ಕಟ್ಟಲು ಸಾಧ್ಯವಿಲ್ಲ. ಆದರೆ ಪ್ರಸ್ತುತ ದಿನಗಳಲ್ಲಿ ಎಲ್ಲರ ಮನಸ್ಸು ಒಡೆದು ಹೋಗಿದೆ. ಸಹೋದರಿ ರಕ್ಷೆ ಕಟ್ಟಲು ಬಂದರೆ ಮೊದಲು ನ್ಯಾಯಾಲಯದಲ್ಲಿರುವ ಪ್ರಕರಣವನ್ನು ವಾಪಸ್ ಪಡೆಯುವಂತೆ ಹೇಳುವ, ಅಣ್ಣ ಬಾಗಿನ ಕೊಡಲು ಬಂದರೂ ಅದಕ್ಕೆ ಬೇರೆ ಅರ್ಥ ಕಲ್ಪಿಸುವಂತಹ ಮನಸ್ಥಿತಿ ನಿರ್ಮಾಣವಾಗಿದೆ. ಇಂತಹ ಮನಸ್ಥಿತಿ ದೂರವಾಗಬೇಕಾದರೆ ನಮ್ಮ ಪರಂಪರೆ ಹಾಗೂ ಮೌಲ್ಯಗಳನ್ನು ಅನುಸರಿಸಬೇಕೆಂದು ಹೇಳಿದರು.

**ಜಾನಪದ ವಿಶಾಲವಾದ ಜಗತ್ತು**

ಜಾನಪದ ಗಾಯಕಿ ಸವಿತಕ್ಕ ಅವರು ಮಾತನಾಡಿ, ಜಾನಪದ ವಿಶಾಲವಾದ ಜಗತ್ತು. ಜನ ಪದವು ನಮ್ಮನ್ನು ಬಹುದೂರ ಕರೆದೊಯ್ದಿದೆ. ಭಾರತದ ಸಂಸ್ಕೃತಿಯನ್ನು ವಿದೇಶಗಳಲ್ಲಿ ಪರಿಚಯಿಸುವಲ್ಲಿ ಜನಪದವೂ

» ನಾಲ್ಕನೇ ಪುಟದಲ್ಲಿ

# ಕಾಡಾನೆಗಳ ಹಿಂಡು ದಾಳಿ: ಭತ್ತದ ಗದ್ದೆ ನಾಶ

## ಬರದ ನಡುವೆ ಆಘಾತ | ವರ್ಷದ ಕೂಳಿಗಾಗಿ ಕಾದಿದ್ದ ರೈತ ಕಂಗಾಲು

• ಪ್ರಜೋದಯ ವರದಿ

**ಬೇಲೂರು:** ಮಳೆಯ ಕೊರತೆಯ ನಡುವೆಯೇ ಕಷ್ಟಪಟ್ಟು ಬೆಳೆಸಿದ್ದ ಭತ್ತದ ಪೈರನ್ನು ಸುಮಾರು ಎಂಟು ಕಾಡಾನೆಗಳ ಹಿಂಡು ತುಳಿದು ಸಂಪೂರ್ಣ ನಾಶಪಡಿಸಿರುವ ಘಟನೆ ತಾಲ್ಲೂಕಿನ ಅರೇಹಳ್ಳಿ ಹೋಬಳಿ ವ್ಯಾಪ್ತಿಯ ಉತ್ತೊಳಲು ಗ್ರಾಮದಲ್ಲಿ ನಡೆದಿದೆ.

ಕೆಲವು ದಿನಗಳ ಹಿಂದಷ್ಟೇ ನಾಟಿ ಮಾಡಿದ್ದ ಭತ್ತದ ಗದ್ದೆಗೆ ಕಾಡಾನೆಗಳ ಹಿಂಡು ದಾಳಿ ಮಾಡಿ ಬಹುತೇಕ ಬೆಳೆಯನ್ನು ತುಳಿದು ನಾಶಪಡಿಸಿದರುವುದರಿಂದ ರೈತರು ಅಪಾರ ಪ್ರಮಾಣದ ನಷ್ಟ ಅನುಭವಿಸುವಂತಾಗಿದೆ. ಕಾಡಾನೆಗಳ ಹಾವಳಿ ಈಗಾಗಲೇ ಕೃಷಿಕರನ್ನು ಸಂಕಷ್ಟಕ್ಕೆ ಸಿಲುಕಿಸಿದ್ದು, ಬೆಳೆ ಉಳಿಸಿಕೊಳ್ಳಲಾಗದೆ ಕೃಷಿಯಿಂದ ವಿಮುಖರಾಗುತ್ತಿರುವ ರೈತರ ಸಂಖ್ಯೆ ಹೆಚ್ಚುತ್ತಿದೆ. ಅದರ ನಡುವೆಯೇ ಬೆಳೆ ನಾಶವಾಗುತ್ತಿರುವ ಘಟನೆಗಳು ರೈತರಲ್ಲಿ ಮತ್ತಷ್ಟು ಆತಂಕ ಮೂಡಿಸಿವೆ.

ಬೆಳೆ ಹಾನಿಗೊಳಗಾದ ರೈತ ಕೃಷ್ಣರಾಜು ಅರಸ್ ಮಾತನಾಡಿ, ನಮಗೆ ಎರಡು ಎಕರೆ ಗದ್ದೆಯಿದೆ. ಕಾಡಾನೆಗಳ ನಿರಂತರ ಸಂಚಾರ ದಿಂದಾಗಿ ಕಳೆದ ಐದಾರು ವರ್ಷಗಳಿಂದ ಒಂದು ಎಕರೆ ಜಮೀನನ್ನು ಪಾಳು ಬಿಟ್ಟಿದ್ದೇವೆ. ಉಳಿದ ಒಂದು ಎಕರೆಯಲ್ಲಿ ಮಾತ್ರ ಭತ್ತ ಬೆಳೆಯುತ್ತಿದ್ದೇವೆ. ಕಳೆದ 2 ವರ್ಷಗಳಿಂದ ಈ ಭಾಗದಲ್ಲಿಯೂ ಕಾಡಾನೆಗಳ ಹಾವಳಿ ಹೆಚ್ಚಾಗಿದೆ ಎಂದು ಅಳಲು ತೋಡಿಕೊಂಡರು.

ಕೃಷಿಯನ್ನೇ ಅವಲಂಬಿಸಿರುವ ನಮಗೆ ಬೇರೆ ಆದಾಯದ ಮೂಲವಿಲ್ಲ. ಹಲವು ಸವಾಲುಗಳ ನಡುವೆಯೂ ಈ ಬಾರಿ ಭತ್ತ ನಾಟಿ ಮಾಡಿದ್ದೇವು. ಆದರೆ ಕಷ್ಟಪಟ್ಟು ಬೆಳೆಸಿದ ಪೈರನ್ನು ಕಾಡಾನೆಗಳು ಸಂಪೂರ್ಣವಾಗಿ ತುಳಿದುನಾಶಪಡಿಸಿವೆ. ವರ್ಷದ ಬದುಕಿಗೆ ಆಸರೆಯಾಗಿದ್ದ ಬೆಳೆ ಕಣ್ಣೆದುರೇ ನಾಶವಾಗಿರುವುದು ನೋವು ತಂದಿದೆಂದು ಬೇಸರ ವ್ಯಕ್ತಪಡಿಸಿದರು.



### ಅರೇಹಳ್ಳಿ ಹೋಬಳಿಯಲ್ಲಿ ಹೆಚ್ಚಿದ ಆತಂಕ

ಉತ್ತೊಳಲು ಗ್ರಾಮ ಸೇರಿ ಅರೇಹಳ್ಳಿ ಹೋಬಳಿ ವ್ಯಾಪ್ತಿಯಲ್ಲಿ ಕಾಡಾನೆಗಳ ಹಾವಳಿ ದಿನ ದಿಂದ ದಿನಕ್ಕೆ ಹೆಚ್ಚುತ್ತಿದೆ. ಭತ್ತ, ಕಾಫಿ ಸೇರಿ ವಿವಿಧ ಬೆಳೆಗಳಿಗೆ ಕಾಡಾನೆಗಳು ಹಾನಿ ಮಾಡುತ್ತಿವೆ. ರಾತ್ರಿ ವೇಳೆ ಕಾಡಾನೆಗಳ ಹಿಂಡು ಗ್ರಾಮ ಹಾಗೂ ಕೃಷಿ ಜಮೀನುಗಳತ್ತ ಆಗಮಿಸುತ್ತಿರುವುದರಿಂದ ರೈತರು ಜೀವಭಯದಲ್ಲೇ ಹೊಲಗಳಿಗೆ ತೆರಳುವಂತಾಗಿದೆ. ಕಷ್ಟಪಟ್ಟು ಬೆಳೆಸಿದ ಬೆಳೆ ಕಟಾವಿಗೆ ಬರುವ ಮುನ್ನವೇ ಕಾಡಾನೆಗಳ ಪಾಲಾಗುತ್ತಿರುವುದು ರೈತರ ಸಂಕಷ್ಟವನ್ನು ಮತ್ತಷ್ಟು ಹೆಚ್ಚಿಸಿದೆ.

**ದೂರು ನೀಡಿದರೂ ಪ್ರಯೋಜನವಿಲ್ಲ:** ಕಾಡಾನೆಗಳ ಹಾವಳಿ ಕುರಿತು ಅರಣ್ಯ ಇಲಾಖೆ ಅಧಿಕಾರಿಗಳಿಗೆ ಹಲವು ಬಾರಿ ಮಾಹಿತಿ ನೀಡಿದರೂ ಶಾಶ್ವತ ಪರಿಹಾರ ದೊರೆತಿಲ್ಲ. ಬೆಳೆ ಹಾನಿಯಾದ ಬಳಿಕ ಪರಿಹಾರಕ್ಕಾಗಿ ಕಚೇರಿಗಳಿಗೆ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಕಾಡಾನೆಗಳ ಭಯದಿಂದ ದನಕರುಗಳನ್ನು ಸಾಕುವುದಕ್ಕೂ ಆತಂಕವಾಗುತ್ತಿದೆ. ನಮ್ಮ ಬದುಕೇ ಅತಂತ್ರವಾಗಿದೆ. ಅರಣ್ಯ ಇಲಾಖೆ ಹಾಗೂ ಸರ್ಕಾರ ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ಶಾಶ್ವತ ಪರಿಹಾರ ಕಲ್ಪಿಸಬೇಕೆಂದು ಒತ್ತಾಯಿಸಿದ್ದಾರೆ.

**ಕೃಷಿ ವೆಚ್ಚದ ನಡುವೆ ಕಾಡಾನೆಗಳ ಕಾಟ:** ಕೃಷಿ ಚಟುವಟಿಕೆಗಳಿಗೆ ಅಗತ್ಯವಿರುವ ಕೂಲಿಕಾರ್ಮಿಕರ ಕೊರತೆ ತೀವ್ರವಾಗಿದ್ದು, ಬಿತ್ತನೆ, ನಾಟಿ, ಗೊಬ್ಬರ, ಔಷಧಿ ಹಾಗೂ ಕೂಲಿ ಸೇರಿ ಕೃಷಿ ವೆಚ್ಚವೂ ಗಣನೀಯವಾಗಿ ಹೆಚ್ಚಾಗಿದೆ. ಇಂತಹ ಪರಿಸ್ಥಿತಿಯಲ್ಲಿ ಬೆಳೆ ಉಳಿಸಿಕೊಳ್ಳಲು ಹಗಲು-ರಾತ್ರಿ ಶ್ರಮಿಸುತ್ತಿರುವ ರೈತರಿಗೆ ಕಾಡಾನೆಗಳ ಹಾವಳಿ ಮತ್ತೊಂದು ದೊಡ್ಡ ಸವಾಲಾಗಿ ಪರಿಣಮಿಸಿದೆ. ಒಂದೆಡೆ ಹೆಚ್ಚುತ್ತಿರುವ ಕೃಷಿ ವೆಚ್ಚ, ಮತ್ತೊಂದೆಡೆ ಕಾರ್ಮಿಕರ ಕೊರತೆ ಹಾಗೂ ಕಾಡಾನೆಗಳ ನಿರಂತರ ದಾಳಿ ರೈತರ ಬದುಕನ್ನು ಸಂಕಷ್ಟಕ್ಕೆ ದೂಡಿದೆ. ಇದೇ ಪರಿಸ್ಥಿತಿ ಮುಂದುವರಿದರೆ ಕೃಷಿಯನ್ನೇ ಕೈಬಿಡುವ ಪರಿಸ್ಥಿತಿ ಎದುರಾಗಬಹುದೆಂದರು.

ಕಾಡಾನೆಗಳ ದಾಳಿಯಿಂದ ಬೆಳೆ ಕಳೆದುಕೊಂಡ ರೈತರಿಗೆ ತ್ವರಿತವಾಗಿ ಸೂಕ್ತ ಪರಿಹಾರ ನೀಡುವುದರ ಜೊತೆಗೆ, ಕಾಡಾನೆಗಳು ಗ್ರಾಮ ಹಾಗೂ ಕೃಷಿ ಪ್ರದೇಶಗಳಿಗೆ ಪ್ರವೇಶಿಸದಂತೆ ಶಾಶ್ವತ ಕ್ರಮ ಕೈಗೊಳ್ಳಬೇಕೆಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

## ಮುಖ್ಯಮಂತ್ರಿ ಸ್ಥಾನವೂ ವ್ಯಾಪಾರದ ವಸ್ತು: ವಾಟಾಳ್ ನಾಗರಾಜ್ ಆರೋಪ

# ಹೈಕಮಾಂಡ್ ಕಪಿಮುಷ್ಟಿಯಲ್ಲಿ ರಾಜ್ಯ ಸರ್ಕಾರ

• ಪ್ರಜೋದಯ ವರದಿ

**ಹಾಸನ:** ರಾಜ್ಯದಲ್ಲಿ ಶಾಸಕರು, ಮಂತ್ರಿಗಳನ್ನು ಕೊಂಡುಕೊಳ್ಳಬಹುದಾದಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಮುಖ್ಯಮಂತ್ರಿ ಸ್ಥಾನವೂ ವ್ಯಾಪಾರದ ವಸ್ತುವಿನಂತಾಗಿದೆ. ಎಲ್ಲವೂ ಹೈಕಮಾಂಡ್‌ನಿಂದಲೇ ನಿರ್ಧಾರವಾಗುತ್ತಿದೆಂದು ಕನ್ನಡ ಚಳುವಳಿ ವಾಟಾಳ್ ಪಕ್ಷದ ರಾಜ್ಯಾಧ್ಯಕ್ಷ ವಾಟಾಳ್ ನಾಗರಾಜ್ ಅವರು ಆರೋಪಿಸಿದರು.

ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಣ್ಣ ಅಧಿಕಾರ ನೀಡಬೇಕಾದರೂ ಹೈಕಮಾಂಡ್‌ನ ಅನುಮತಿ ಪಡೆಯಬೇಕಾದ ಪರಿಸ್ಥಿತಿ ಇದೆ. ಯಾರು ಮಂತ್ರಿಯಾಗಬೇಕು, ಯಾರು ಮುಖ್ಯಮಂತ್ರಿಯಾಗ ಬೇಕೆಂಬುದನ್ನೂ ಹೈಕಮಾಂಡ್ ನಿರ್ಧರಿಸುವ ಸ್ಥಿತಿ ನಿರ್ಮಾಣವಾಗಿದೆ ಎಂದು ದೂರಿದರು.



ರಾಜ್ಯದಲ್ಲಿ ಪ್ರಜಾಪ್ರಭುತ್ವ ಸಂಪೂರ್ಣವಾಗಿ ನಾಶವಾಗಿದೆ. ಮಿಲಿಟರಿ ಆಡಳಿತದ ರೀತಿ ಯಲ್ಲಿ ಸರ್ಕಾರ ನಡೆದುಕೊಳ್ಳುತ್ತಿದೆ. ವಿಧಾನ ಸಭೆ ಮತ್ತು ವಿಧಾನ ಪರಿಷತ್ ಎರಡೂ ವಿಫಲವಾಗಿವೆ. ವಿರೋಧ ಪಕ್ಷಗಳೂ ಗಂಭೀರವಾಗಿ ಚಿಂತನೆ ಮಾಡದೆ ವಿಫಲವಾಗಿವೆ. ಸರ್ಕಾರದ ಹಲವು ನೀತಿಗಳ ಬಗ್ಗೆಯೂ ಅಸಮಾಧಾನ ವ್ಯಕ್ತಪಡಿಸಿದ ಅವರು, ಉದ್ಯಾನವನಗಳನ್ನು ಖಾಸಗಿಯವರಿಗೆ ನೀಡಲು ಅವಕಾಶ ಕಲ್ಪಿಸುವ ಕ್ರಮದಿಂದ ಬೆಂಗಳೂರಿನ ಲಾಲ್‌ಬಾಗ್, ಕಬ್ಬನ್‌ಪಾರ್ಕ್‌ಗಳಂತಹ ಸಾರ್ವಜನಿಕ ಆಸ್ತಿಗಳಿಗೂ ಅಪಾಯ ಎದುರಾಗಬಹುದೆಂದು ಆತಂಕ ವ್ಯಕ್ತಪಡಿಸಿದರು.

ಕೆಆರ್‌ಎಸ್‌ನಿಂದ ತಮಿಳುನಾಡಿಗೆ ಎಷ್ಟು ನೀರು ಹೋಗಿದೆ, ಯಾವ ರೀತಿಯಲ್ಲಿ ನೀರು ಹರಿಸಲಾಗಿದೆ ಹಾಗು ಅದರಲ್ಲಿ ಏನೇನು ನಡೆದಿದೆ ಎಂಬುದು ಉನ್ನತಮಟ್ಟದ ತನಿಖೆ ಯಿಂದ ಹೊರಬರಬೇಕು. ಈ ವಿಚಾರವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು. ತಮಿಳುನಾಡು ಮುಖ್ಯಮಂತ್ರಿ ವಿಜಯ್ ಅವ ರೊಂದಿಗೆ ರಾಜ್ಯ ಸರ್ಕಾರದ ನಾಯ ಕತ್ವಕ್ಕೆ ಉತ್ತಮ ಬಾಂಧವ್ಯವಿದೆ. ಪಕ್ಷದ ಹೈಕಮಾಂಡ್‌ಗೂ ಅವರೊಂದಿಗೆ ನಂಟಿದೆ.

» ನಾಲ್ಕನೇ ಪುಟದಲ್ಲಿ

### ನೈಸ್ ರಸ್ತೆಯಲ್ಲಿ ಭಾರೀ ಭ್ರಷ್ಟಾಚಾರ

ನೈಸ್ ರಸ್ತೆಯ ವಿಚಾರವಾಗಿಯೂ ವಾಟಾಳ್ ನಾಗರಾಜ್ ಅವರು ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು. ನೈಸ್ ರಸ್ತೆ ಬಹಳ ಹಿಂದೆಯೇ ದೇವೇಗೌಡರು ಮುಖ್ಯಮಂತ್ರಿಯಾಗಿದ್ದ ಕಾಲದಲ್ಲಿ ಆರಂಭವಾದ ಯೋಜನೆ. ಇದು ಹೊಸದಾಗಿ ನಿರ್ಮಾಣವಾದ ಯೋಜನೆಯಲ್ಲ. ನೈಸ್ ಯೋಜನೆಯಲ್ಲಿ ರೈತರಿಗೆ ಅನ್ಯಾಯವಾಗಿದೆ. ನೈಸ್ ಮಾಲೀಕರು ರೈತರ ಜಮೀನುಗಳನ್ನು ಪಡೆದುಕೊಂಡಿದ್ದಾರೆ. ಅದಕ್ಕೆಲ್ಲ ಸರ್ಕಾರಗಳೇ ಕಾರಣ ಎಂದು ಆರೋಪಿಸಿದರು. ಎಷ್ಟು ಪ್ರಮಾಣದಲ್ಲಿ ಲೂಟಿ ನಡೆದಿದೆ ಎಂಬುದಕ್ಕೆ ಲೆಕ್ಕವೇ ಇಲ್ಲ. ಕಣ್ಮುಚ್ಚಿ ಕಾಣದ ರೀತಿಯಲ್ಲಿ ಭ್ರಷ್ಟಾಚಾರ ನಡೆಸಿದ್ದಾರೆಂದು ದೂರಿದರು.

### ತಮಿಳುನಾಡಿಗೆ ಲೆಕ್ಕವಿಲ್ಲದಷ್ಟು ನೀರು

ತಮಿಳುನಾಡಿಗೆ ರಾಜ್ಯದ ಜಲಾಶಯಗಳಿಂದ ಅವೈಜ್ಞಾನಿಕವಾಗಿ ಹಾಗು ಲೆಕ್ಕವಿಲ್ಲದೆ ನೀರು ಹರಿಸಲಾಗುತ್ತಿದೆ. ಈ ಕುರಿತು ರಾಜ್ಯ ಸರ್ಕಾರದ ವಿರುದ್ಧ ಉನ್ನತಮಟ್ಟದ ತನಿಖೆ ನಡೆಸಬೇಕು. ತಮಿಳುನಾಡಿಗೆ ಈ ಹಿಂದೆ ಯಾವತ್ತೂ ಇಷ್ಟು ಪ್ರಮಾಣದಲ್ಲಿ ನೀರು ಹರಿದು ಹೋಗಿರಲಿಲ್ಲ. ಎಷ್ಟು ನೀರು ಹರಿಸಲಾಗಿದೆ, ಯಾವ ರೀತಿಯಲ್ಲಿ ನೀರು ಬಿಡಲಾಗಿದೆ, ಜಲಾಶಯಗಳಿಗೆ ಎಷ್ಟು ಒಳಹರಿವು ಬಂದಿದೆ ಎಂಬುದರ ಬಗ್ಗೆ ಯಾವುದೇ ಸ್ಪಷ್ಟ ಲೆಕ್ಕವಿಲ್ಲ. ಕಬಿನಿ, ಹೇಮಾವತಿ ಹಾಗು ಕಾವೇರಿ ನದಿಗಳಿಂದ ಎಷ್ಟು ಪ್ರಮಾಣದ ನೀರು ತಮಿಳುನಾಡಿಗೆ ಹೋಗಿದೆ ಎಂಬುದಕ್ಕೂ ಸರಿಯಾದ ಲೆಕ್ಕವಿಲ್ಲ ಎಂದು ದೂರಿದರು.

# ಬೈಕ್ ಡಿಕ್ಕಿ: ಗ್ರಾ.ಪಂ.ಮಾಜಿ ಸದಸ್ಯ ಸಾವು

• ಪ್ರಜೋದಯ ವರದಿ

**ಅರಸೀಕೆರೆ:** ಬೈಕ್‌ಗಳ ನಡುವೆ ಮುಖಾಮುಖಿ ಡಿಕ್ಕಿ ಸಂಭವಿಸಿ ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ಮೃತಪಟ್ಟಿರುವ ಘಟನೆ ನಗರದ ಹುಳಿಯಾರು ರಸ್ತೆಯಲ್ಲಿ ನಡೆದಿದೆ. ಗಂಗಾನಾಯ್ಕ (50) ಮೃತ.

ಅರಸೀಕೆರೆಯಿಂದ ಬೈಕ್‌ನಲ್ಲಿ ಗಂಗಾನಾಯ್ಕ ಅವರು ತಮ್ಮ ಸ್ವಗ್ರಾಮ ಜೆ.ಶಂಕರನಹಳ್ಳಿ ತಾಂಡ್ಯಗೆ ತೆರಳುತ್ತಿದ್ದ ವೇಳೆ ಮುಬಾರಕ್ ಎಂಬ ಯುವಕ ಡಿಯೋ ಸ್ಕೂಟಿಯನ್ನು ವೇಗವಾಗಿ ಚಲಾಯಿಸಿಕೊಂಡು ಬಂದು ಗಂಗಾನಾಯ್ಕ ಅವರ ಬೈಕ್‌ಗೆ ಡಿಕ್ಕಿ ಹೊಡೆದಿದ್ದಾನೆ. ಅಪಘಾತದಲ್ಲಿ ಗಂಭೀರವಾಗಿ ಗಾಯಗೊಂಡಿದ್ದ ಗಂಗಾನಾಯ್ಕ



ಅವರು ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು ಚಿಕಿತ್ಸೆ ಫಲಕಾರಿಯಾಗದೆ ಸಾವನ್ನಪ್ಪಿದ್ದಾರೆ. ಅಪಘಾತದ ಭೀಕರ ದೃಶ್ಯ ಸಿಸಿಟಿವಿಯಲ್ಲಿ ಸೆರೆಯಾಗಿದೆ.

ಅಬಕಾರಿ ಸಚಿವ ಕೆ.ಎಂ.ಶಿವಲಿಂಗೇಗೌಡ ಅವರು ಆಸ್ಪತ್ರೆಗೆ ಭೇಟಿ ನೀಡಿ ಮೃತದೇಹದ ಅಂತಿಮ ದರ್ಶನ ಪಡೆದರು. ಅರಸೀಕೆರೆ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ನಾಪತ್ತೆ ವ್ಯಕ್ತಿ ಮೃತದೇಹಕ್ಕೆ ಶೋಧ: ಎರಡು ಶವ ಪತ್ತೆ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ನಾಪತ್ತೆಯಾಗಿದ್ದ ವ್ಯಕ್ತಿಯ ಮೃತದೇಹಕ್ಕಾಗಿ ಶೋಧ ನಡೆಸುತ್ತಿದ್ದ ವೇಳೆ ಅದೇ ಸ್ಥಳದಲ್ಲಿ ಮತ್ತೊಬ್ಬ ವ್ಯಕ್ತಿಯ ಶವವೂ ಪತ್ತೆಯಾಗಿರುವ ಘಟನೆ ತಾಲ್ಲೂಕಿನ ಕಲಸಿಂದ ಗ್ರಾಮದ ಬಳಿ ನಡೆದಿದೆ.

ಚನ್ನರಾಯಪಟ್ಟಣದಲ್ಲಿಸ್ಟುಡಿಯೋ ನಡೆಸುತ್ತಿದ್ದ ನಂದಕುಮಾರ್ (60) ಅವರು ಕೌಟುಂಬಿಕ ಕಲಹದ ಹಿನ್ನಲೆ ಬುಧವಾರ ಮನೆಯಿಂದ ಹೊರಗೆ ಹೋಗಿದ್ದರು. ಬಳಿಕ ಮನೆಗೆ ವಾಪಾಸ್ ಬಾರದ ಹಿನ್ನಲೆ ಕುಟುಂಬಸ್ಥರು ಎಲ್ಲೆಡೆ ಹುಡುಕಾಟ ನಡೆಸಿದ್ದು, ನಂದಕುಮಾರ್ ಕಾಣೆಯಾಗಿರುವ



ಕುರಿತು ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು.

ಈ ನಡುವೆ ಕಲಸಿಂದ ಗ್ರಾಮದ ಸಮೀಪ ಹೇಮಾವತಿ ನಾಲೆಯ ಬಳಿ ನಂದಕುಮಾರ್ ಅವರ ಪಾದರಕ್ಷೆಗಳು ಪತ್ತೆಯಾಗಿದ್ದವು. ಅದರಿಂದ ಅವರು ನಾಲೆಗೆ ಬಿದ್ದಿರುವ ಶಂಕೆ ವ್ಯಕ್ತವಾಗಿದ್ದು, ಪೊಲೀಸರು ನಾಲೆಯಲ್ಲಿ ಹರಿಯುತ್ತಿದ್ದ ನೀರಿನಲ್ಲಿ ಶೋಧ ಕಾರ್ಯ

» ನಾಲ್ಕನೇ ಪುಟದಲ್ಲಿ

# ಕ್ಯಾತನಹಳ್ಳಿ ಏತ ನೀರಾವರಿ ಯೋಜನೆ ಪರಿಶೀಲನೆ



• ಪ್ರಜೋದಯ ವರದಿ

**ಹಾಸನ:** ತಾಲ್ಲೂಕಿನ ಕ್ಯಾತನಹಳ್ಳಿ ಏತ ನೀರಾವರಿ ಯೋಜನೆ ನಡೆಯುತ್ತಿರುವ ಸ್ಥಳಕ್ಕೆ ಶುಕ್ರವಾರ ಶಾಸಕ ಹೆಚ್.ಪಿ.ಸ್ವರೂಪ್ ಅವರು ಭೇಟಿ ನೀಡಿ ಕಾಮಗಾರಿಯ ಪ್ರಗತಿ ಹಾಗು ಯೋಜನೆಯ ಸ್ಥಿತಿಗತಿಗಳ ಕುರಿತು ಪರಿಶೀಲನೆ ನಡೆಸಿದರು.

ಈ ವೇಳೆ ಮಾತನಾಡಿದ ಅವರು, ಹಲವು ದಿನಗಳಿಂದ ಕೆಟ್ಟು ನಿಂತಿರುವ ವಿದ್ಯುತ್ ಯಂತ್ರೋಪಕರಣಗಳನ್ನು ತಕ್ಷಣ ದುರಸ್ತಿ ಮಾಡಿಸಿ ಕೆರೆಗಳಿಗೆ ನೀರು ಹರಿಸುವ ಮೂಲಕ ರೈತರಿಗೆ ಅನುಕೂಲ ಕಲ್ಪಿಸಬೇಕೆಂದು ಸ್ಥಳದಲ್ಲಿದ್ದ ಅಧಿಕಾರಿಗಳಿಗೆ ಸೂಚಿಸಿ, ಯೋಜನೆಯಡಿ ಬಾಕಿ ಉಳಿದಿರುವ ಕಾಮಗಾರಿಗಳನ್ನು ಶೀಘ್ರ ಪೂರ್ಣಗೊಳಿಸಲು ಸರ್ಕಾರದ ಮಟ್ಟದಲ್ಲಿ ಸಂಬಂಧಪಟ್ಟ ಸಚಿವರೊಂದಿಗೆ ಚರ್ಚಿಸಿ ಅನುದಾನ ಬಿಡುಗಡೆಗೆ ಅಗತ್ಯ ಕ್ರಮ ಕೈಗೊಳ್ಳುವು ದಾಗಿ ಭರವಸೆ ನೀಡಿದರು.

ಕ್ಯಾತನಹಳ್ಳಿ ಏತ ನೀರಾವರಿ ಯೋಜನೆಯಿಂದ ಸುತ್ತಮುತ್ತಲಿನ ಕೆರೆಗಳಿಗೆ ನೀರು ಹರಿದು ರೈತರಿಗೆ ಕೃಷಿ ಚಟುವಟಿಕೆಗಳಿಗೆ ಅನುಕೂಲವಾಗುವ ಹಿನ್ನಲೆ ಯೋಜನೆಯ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸುವ ಅಗತ್ಯವಿದೆ ಎಂದರು.

ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು, ಕೆಇಬಿ ಅಧಿಕಾರಿಗಳು, ಗ್ರಾಮಸ್ಥರು, ರೈತರು ಇದ್ದರು.

## ವಾಹನ ಸಂಚಾರಕ್ಕೆ ತಡೆ | ಪೊಲೀಸರು-ಪ್ರತಿಭಟನಾಕಾರರ ನಡುವೆ ವಾಗ್ವಾದ

# ಹೆದ್ದಾರಿ ಕಾಮಗಾರಿ ಅವೈಜ್ಞಾನಿಕ: ಸ್ಥಳೀಯರ ಆಕ್ರೋಶ

• ಪ್ರಜೋದಯ ವರದಿ

**ಹಾಸನ:** ರಾಷ್ಟ್ರೀಯ ಹೆದ್ದಾರಿ ವಿಸ್ತರಣೆ ಕಾಮಗಾರಿ ಅವೈಜ್ಞಾನಿಕವಾಗಿದೆ ಎಂದು ಆರೋಪಿಸಿ ನಗರ ಹೊರವಲಯದ ಬೊಮ್ಮನಾಯಕನಹಳ್ಳಿ ಬಡಾವಣೆ ನಿವಾಸಿಗಳು ಶುಕ್ರವಾರ ಬೆಂಗಳೂರು-ಮಂಗಳೂರು ಹೆದ್ದಾರಿಯಲ್ಲಿ ವಾಹನ ಸಂಚಾರ ತಡೆದು ಪ್ರತಿಭಟನೆ ನಡೆಸಿದರು.

ರಾಷ್ಟ್ರೀಯ ಹೆದ್ದಾರಿ-75ರ ಬಿ.ಎಂ.ರಸ್ತೆಯಲ್ಲಿ ದಿಢೀರ್ ರಸ್ತೆ ತಡೆ ನಡೆಸಿದ ಪ್ರತಿಭಟನಾಕಾರರು ಸ್ಥಳದಲ್ಲಿ ಸರ್ವಿಸ್ ರಸ್ತೆ ಹಾಗು ಅಂಡರ್‌ಪಾಸ್ ನಿರ್ಮಿಸುವಂತೆ ಒತ್ತಾಯಿಸಿದರು. ಏಕಾಏಕಿ ಹೆದ್ದಾರಿ ತಡೆದ ಪರಿಣಾಮ ರಸ್ತೆಯಲ್ಲಿ ವಾಹನ ಸಂಚಾರಕ್ಕೆ ಅಡ್ಡಿಯಾಗಿದ್ದು, ವಾಹನ ಸವಾರರು ಪರದಾಡುವಂತಾಯಿತು. ರಸ್ತೆ ತಡೆ ಹಿನ್ನಲೆ ಸ್ಥಳಕ್ಕೆ ಆಗಮಿಸಿದ ಪೊಲೀಸರು ಪ್ರತಿಭಟನಾಕಾರರನ್ನು ಮನವೊಲಿಸಲು ಮುಂದಾದರು. ಈ ವೇಳೆ ಪೊಲೀಸರು ಹಾಗು ಪ್ರತಿಭಟನಾಕಾರರ ನಡುವೆ ಕೆಲಕಾಲ ವಾಗ್ವಾದ ನಡೆಯಿತು.

ವಿಷಯ ತಿಳಿದು ಪ್ರತಿಭಟನಾ ಸ್ಥಳಕ್ಕೆ ಶಾಸಕ ಹೆಚ್.ಪಿ.ಸ್ವರೂಪ್ ಅವರು ಭೇಟಿ ನೀಡಿ, ಪ್ರತಿಭಟನಾಕಾರರ ಅಹವಾಲು ಆಲಿಸಿದರು. ಬಳಿಕ ಸ್ಥಳಕ್ಕೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳೂ ಆಗಮಿಸಿದರು. ಈ ವೇಳೆ ಅಧಿಕಾರಿಗಳ ವಿರುದ್ಧ ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.



ಹೆದ್ದಾರಿಗೆ ನಮ್ಮ ಜಮೀನು ಸ್ವಾಧೀನ ಪಡಿಸಿಕೊಂಡಿದ್ದರೂ, ಸ್ಥಳೀಯ ನಿವಾಸಿಗಳ ಸಂಚಾರಕ್ಕೆ ಪರ್ಯಾಯ ವ್ಯವಸ್ಥೆ ಕಲ್ಪಿಸಿಲ್ಲ. ಅದರಿಂದ ನಾವು ಪ್ರತಿದಿನ ಜೀವ ಕೈಯಲ್ಲಿ ಹಿಡಿದು ರಸ್ತೆ ದಾಟುವ ಪರಿಸ್ಥಿತಿ ನಿರ್ಮಾಣವಾಗಿದೆ. ಅದರಿಂದಲೇ ಈ ಭಾಗದಲ್ಲಿ ಅಪಘಾತ ಸಂಖ್ಯೆ ಹೆಚ್ಚುತ್ತಿವೆ. ಅಪಘಾತದಿಂದ ಅನೇಕರು ಪ್ರಾಣ ಕಳೆದುಕೊಂಡಿದ್ದು, ಕೆಲವರು ಅಂಗವಿಕಲರಾ ಗಿದ್ದಾರೆ. ಆದರೂ ಅಧಿಕಾರಿಗಳು ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸುವಲ್ಲಿ ನಿರ್ಲಕ್ಷ್ಯ ತೋರುತ್ತಿದ್ದಾರೆಂದು ಆಕ್ರೋಶ ವ್ಯಕ್ತಪಡಿಸಿದರು.

ಸಾವು-ನೋವು ನಿಲ್ಲಬೇಕಾದರೆ ಸರ್ವೀಸ್ ರಸ್ತೆ ಇಲ್ಲವೇ ಮೇಲ್ಸೇತುವೆ ಅಥವಾ ಅಂಡರ್ ಪಾಸ್ ವ್ಯವಸ್ಥೆ ಕಲ್ಪಿಸಬೇಕು. ಹೆದ್ದಾರಿ ಕಾಮಗಾರಿ ವೇಳೆ ಯುಜಿಡಿ ಹಾಗು ಕುಡಿಯುವ ನೀರಿನ ಪೈಪ್‌ಗಳಿಗೆ ಹಾನಿಯಾಗಿದ್ದು, 1 ವರ್ಷದಿಂದ ಕಾಮಗಾರಿ ನಡೆಯುತ್ತಿದ್ದರೂ ಜನರ ಮೂಲ ಭೂತ ಸಮಸ್ಯೆಗಳಿಗೆ ಪರಿಹಾರ ಸಿಕ್ಕಿಲ್ಲ ಎಂದು ದೂರಿದರು.

**ವಾಗ್ವಾದ-ಶಾಸಕ ಭೇಟಿ**

ಹೆದ್ದಾರಿ ಬಂದ್ ಮಾಡಲು ಪ್ರತಿಭಟನಾಕಾರರು ಮುಂದಾದಾಗ, ಪೊಲೀಸರು ತಡೆಯಲು ಮುಂದಾದರು. ಈ ವೇಳೆ ನಗರಸಭೆ ಮಾಜಿ ಅಧ್ಯಕ್ಷ ಆರ್.ಮೋಹನ್ ಪೊಲೀಸರ ನಡುವೆ ಮಾತಿನ ಚಕಮುಖಿ ನಡೆಯಿತು. ತಮ್ಮ ಬೇಡಿಕೆ ಈಡೇರಿಕೆ ಕುರಿತು ಅಧಿಕಾರಿಗಳಿಂದ ಸ್ಪಷ್ಟ ಭರವಸೆ ಬೇಕೆಂದು ಧರಣಿ ಕುಳಿತರು.

» ನಾಲ್ಕನೇ ಪುಟದಲ್ಲಿ

### ಅಧಿಕಾರಿಗಳೊಂದಿಗೆ ಸಭೆ: ಶಾಸಕ ಭರವಸೆ

ಪ್ರತಿಭಟನಾಕಾರರ ಬೇಡಿಕೆಗಳ ಕುರಿತು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗ ಳೊಂದಿಗೆ ಸಭೆ ನಡೆಸಿ ಸಮಸ್ಯೆ ಪರಿಹರಿಸುವುದಾಗಿ ಶಾಸಕ ಹೆಚ್.ಪಿ.ಸ್ವರೂಪ್ ಅವರು ಭರವಸೆ ನೀಡಿದರು. ಶಾಸಕರ ಭರವಸೆ ಹಿನ್ನಲೆ ಪ್ರತಿಭಟನಾಕಾರರು ರಸ್ತೆ ತಡೆ ಹಿಂಪಡೆದು ಪ್ರತಿಭಟನೆ ಅಂತ್ಯಗೊಳಿಸಿದರು. ಸರ್ವಿಸ್ ರಸ್ತೆ ಹಾಗು ಅಂಡರ್‌ಪಾಸ್ ನಿರ್ಮಾಣಕ್ಕೆ ಕ್ರಮ ಕೈಗೊಳ್ಳದಿದ್ದರೆ ಮುಂದಿನ ದಿನಗಳಲ್ಲಿ ಅನಿರ್ದಿಷ್ಟಾವಧಿ ಧರಣಿ ನಡೆಸುವುದಾಗಿ ಎಚ್ಚರಿಕೆ ನೀಡಿದರು.

# ಆಕಸ್ಮಿಕ ಬೆಂಕಿ: ವಾಸದ ಕೋಣೆಗೆ ಹಾನಿ



**ಹಾಸನ:** ಆಕಸ್ಮಿಕ ಬೆಂಕಿಗೆ ವಾಸದ ಕೊಠಡಿಯಲ್ಲಿದ್ದ ಸಾಮಾಗ್ರಿಗಳೆಲ್ಲಾ ಆಹುತಿಯಾಗಿ ಬೆಂಕಿಯ ಕೆನ್ನಾಲಿಗೆಗೆ ಸಂಪೂರ್ಣ ಗೋಡೆ ಕಪ್ಪಾಗಿರುವ ಘಟನೆ ನಗರದ ಬಸಟ್ಟಿಕೊಪ್ಪಲಿನಲ್ಲಿ ಶುಕ್ರವಾರ ನಡೆದಿದೆ.

ನಾಲ್ಕುರಾಟೆ ಬಾವಿ ಸಮೀಪದ ಜಿ.ಡಿ.ಆರ್ಕೇಡ್‌ನ ಮೂರನೇ ಮಹಡಿಯಲ್ಲಿ ಅವಘಡ ಸಂಭವಿಸಿದೆ. ಕಟ್ಟಡದ ಕೆಳಮಹಡಿಯಲ್ಲಿರುವ ಬಾರ್‌ನಲ್ಲಿ ಕೆಲಸ ಮಾಡಿಕೊಂಡಿರುವ ಹೊರ ರಾಜ್ಯದ ಉದ್ಯೋಗಿ ಮಧ್ಯಾಹ್ನ ಸ್ನಾನಕ್ಕೆಂದು ಬಿಸಿ ನೀರು ಕಾಯಿಸಲು ಕಾಯಿಲ್ ಹಾಕಿದ್ದ. ಈ ವೇಳೆ ಆಕಸ್ಮಿಕವಾಗಿ ಬೆಂಕಿ ಹೊತ್ತಿದೆ. ಪಕ್ಕದಲ್ಲೇ ಇದ್ದ ದಿವಾನ್ ಕಾಟ್‌ಗೆ ಬೆಂಕಿ ಹರಡಿ ಸಂಪೂರ್ಣ ಸುಟ್ಟು ಕರಕಲಾಗಿದೆ. ಬೆಂಕಿಯ ಜ್ವಾಲೆ ಕಂಡ ಯುವಕ ತಕ್ಷಣ ಕೆಳಗೆ ಓಡಿಬಂದು ವಿಷಯ ತಿಳಿಸಿದ್ದಾನೆ. ದಟ್ಟ ಹೊಗೆ ಆವರಿಸಿದ್ದರಿಂದ ತಕ್ಷಣಕ್ಕೆ ಬೆಂಕಿ ನಂದಿಸಲು ಸಾಧ್ಯವಾಗಿಲ್ಲ. ಅಷ್ಟರಲ್ಲಿ ದಿವಾನ್ ಕಾಟ್, ವಿದ್ಯುತ್ ಪ್ಲಗ್, ಬಟ್ಟೆಗಳು ಸುಟ್ಟು ಕರಕಲಾಗಿದ್ದವು. ನೀರು ಸುರಿದಿದ್ದರಿಂದ ಬೆಂಕಿ ನಂದಿತಾದರೂ ಬಹಳ ಸಮಯದ ವರೆಗೆ ದಟ್ಟ ಹೊಗೆ ಆವರಿಸಿಕೊಂಡಿತ್ತು. ಅಗ್ನಿಶಾಮಕ ಸಿಬ್ಬಂದಿ ಬರುವಷ್ಟರಲ್ಲಿ ಬೆಂಕಿ ನಂದಿಸಲಾಗಿತ್ತು.

# ಜ್ಞಾನದ ಮಾರ್ಗ ತೋರಿಸಿದ ನಾರಾಯಣ ಗುರು

## ಮನುಷ್ಯರೆಲ್ಲರೂ ಒಂದೇ ಎಂಬ ಸಮಾನತೆಯ ತತ್ವ ಸಾರಿದ ಮಹಾನ್ ವ್ಯಕ್ತಿ ಬ್ರಹ್ಮಶ್ರೀ

• ಪ್ರಜೋದಯ ವರದಿ

**ಹಾಸನ:** ಸಮಾಜದ ಹಿಂದುಳಿದ ವರ್ಗದವರ ಉದ್ಧಾರಕ್ಕಾಗಿ ಶ್ರಮಿಸಿದ ನಾರಾಯಣ ಗುರು ಅವರು ಮೂಢನಂಬಿಕೆಗಳನ್ನು ಬಿಟ್ಟು ಜ್ಞಾನದ ಮಾರ್ಗದಲ್ಲಿ ನಡೆಯಲು ಜನರಿಗೆ ಮಾರ್ಗದರ್ಶ ನೀಡಿದರು ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಅಧ್ಯಕ್ಷ ಡಾ.ಎಚ್.ಎಲ್.ಮಲ್ಲೇಶ್ ಗೌಡ ಅವರು ತಿಳಿಸಿದ್ದಾರೆ.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ಶುಕ್ರವಾರ ಆಯೋಜಿಸಿದ್ದ ಬ್ರಹ್ಮಶ್ರೀ ನಾರಾಯಣಗುರು ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಪ್ರಕೃತಿಗಿಂತ ದೊಡ್ಡ ಗುರು ಇಲ್ಲ, ಮನುಷ್ಯರೆಲ್ಲರೂ ಒಂದೇ ಎಂಬ ಸಮಾನತೆಯ ತತ್ವವನ್ನು ಅವರು ಬಲವಾಗಿ ಸಾರಿ, ಜಾತಿ ಹೆಸರಿನಲ್ಲಿ ನಡೆಯುತ್ತಿದ್ದ ಶೋಷಣೆಯನ್ನು ವಿರೋಧಿಸಿದರು ಎಂದು ಹೇಳಿದರಲ್ಲದೆ, ನಾರಾಯಣ ಗುರುಗಳನ್ನು ಒಂದು ನಿರ್ದಿಷ್ಟ ಜಾತಿಯ ಗುರುವೆಂದು ಭಾವಿಸಲು ಸಾಧ್ಯವಿಲ್ಲ,



ಎಲ್ಲಾ ಜಾತಿ ಧರ್ಮವು ಒಂದೇ ಎಂಬ ಮನೋಭಾವ ಹೊಂದಿದ ಮಹಾನ್ ವ್ಯಕ್ತಿ ಅವರಾಗಿದ್ದರು ಎಂದರು.

ಉಪ ವಿಭಾಗಾಧಿಕಾರಿ ಜಗದೀಶ್ ಗಂಗಣ್ಣನವರ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಜಾತಿ, ಧರ್ಮ, ಭೇದ ಭಾವಗಳನ್ನು ಹೋಗಲಾಡಿಸಲ್ಲೂ ಇಂತಹ ಮಹಾನ್ ವ್ಯಕ್ತಿಗಳ ಪಾತ್ರ ತುಂಬಾ ಮುಖ್ಯವಾಗಿದೆ. ಜಾತಿ ಪದ್ಧತಿ, ಅಸ್ಪೃಶ್ಯತೆ ಹಾಗೂ ಮೂಢನಂಬಿಕೆ ಗಳನ್ನು ಅವರು ತೀವ್ರವಾಗಿ ವಿರೋಧಿಸಿ ಒಂದೇ ಜಾತಿ, ಒಂದೇ ಮತ ಎಂಬ ಅಮೂಲ್ಯ ಸಂದೇಶವನ್ನು ಸಾರುವ ಮೂಲಕ ಸಮಾಜದಲ್ಲಿ ಸಮಾನತೆ ತರಲು ಶ್ರಮಿಸಿದ್ದಾರೆ, ಜಾತಿ-ಮತಗಳ ಭೇಧವಿಲ್ಲದೆ ನವೆಲ್ಲರೂ ಒಂದೇ ಎಂಬ ಭಾವನೆಯನ್ನು ಬೆಳೆಸಿಕೊಳ್ಳೋಣ ಎಂದು ಹೇಳಿದರು.

ಹೊಳೆನರಸೀಪುರ ಕ್ಷೇತ್ರ ಸಂಪನ್ಮೂಲ ವ್ಯಕ್ತಿ ಮತ್ತು ಸಾಹಿತಿ ಎಂ.ಜಿ. ಪರಮೇಶ್ ಮಡಬಲು ಅವರು ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿ, ನಾರಾಯಣ ಗುರುಗಳ ಆದರ್ಶಗಳು ಎಲ್ಲ ಕಾಲಕ್ಕೂ ಪ್ರಸ್ತುತ, ಅವರ ತತ್ವಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳೋಣ ಎಂದು ಕರೆ ನೀಡಿದರಲ್ಲದೆ, ಕೇರಳ ರಾಜ್ಯದಲ್ಲಿ ಜಾತಿ, ಮತ ಭೇದಗಳು ಹೆಚ್ಚಾಗಿದ್ದ ಕಾಲದಲ್ಲಿ ನಾರಾಯಣ ಗುರುವೆಂಬ ಸಮಾಜಕ ಸುಧಾರಕರು ಸಮಾಜದ ತಾರತಮ್ಯಗಳನ್ನು ಕಡಿಮೆ ಮಾಡಲು ಅವರ ಇಡೀ ಜೀವನವನ್ನು ಮುಡಿಪಾಗಿಟ್ಟರು ಎಂದು ತಿಳಿಸಿದರು.

ಒಂದೇ ಜಾತಿ, ಒಂದೇ ಮತ ಹಾಗೂ ಒಂದೇ ದೇವರು ಎಂಬ ಸತ್ಯವಾಕ್ಯವನ್ನು ತಂದು ಸಮಾಜದಲ್ಲಿ ಅಸ್ಪೃಶ್ಯತೆಯ ಪಿಡುಗನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಿದವರೇ ಶ್ರೀ ನಾರಾಯಣಗುರು ಎಂದು ಹೇಳಿದ ಅವರು, ಹಿಂದುಳಿದ ವರ್ಗದವರಿಗೆ ದೇಗುಲ ಪ್ರವೇಶ ಎಂಬ ಆಚರಣೆಯನ್ನು ಹೋಗಲಾಡಿಸಿ ಸ್ವಂತ ದೇವಸ್ಥಾನಗಳನ್ನು ಪ್ರತಿಷ್ಠಾಪಿಸಿ ಎಲ್ಲರಿಗೂ ಪೂಜೆಯ ಹಕ್ಕನ್ನು ಕಲ್ಪಿಸಿಕೊಟ್ಟರು ಎಂದು ತಿಳಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ|| ಹೆಚ್.ಪಿ.ತಾರಾನಾಥ್, ಜಿಲ್ಲಾ ಸರ್ಕಾರಿ ನೌಕರರ ಸಂಘದ ಕೋಶ ಅಧ್ಯಕ್ಷ ಕೆ.ಆರ್.ಹೇಮಂತ್ ಹಾಗೂ ಮತ್ತಿತರರು ಉಪಸ್ಥಿತರಿದ್ದರು.

## ಇಂದು- ನಾಳೆ ರಾಷ್ಟ್ರೀಯ ಕ್ರೀಡಾ ದಿನಾಚರಣೆ

**ಹಾಸನ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಂಯುಕ್ತಾಶ್ರಯದಲ್ಲಿ ಆ.28 ರಿಂದ 30 ರ ವರೆಗೆ ರಾಷ್ಟ್ರೀಯ ಕ್ರೀಡಾ ದಿನಾಚರಣೆಯನ್ನು ಆಚರಿಸುತ್ತಿದ್ದು, ಖೇಲೇಗಾ ಭಾರತ್, ಜೀತೇಗಾ ಭಾರತ್, ಏಕ್ ಗಂಟಾ ಖೇಲ್‌ಕೆ ಮೈದಾನ್ ಮೇನ್ ಹಾಗೂ ಸೈಕಲ್ ಆವೃತ್ತಿಯಲ್ಲಿ ಉಲ್ಲಾಸಕರ, ಆರೋಗ್ಯ ಕೇಂದ್ರಿತ ಭಾನುವಾರಗಳು ಎಂಬ ಧ್ಯೆಯವಾಕ್ಯದೊಂದಿಗೆ 3 ದಿನಗಳ ಕಾಲ ರಾಷ್ಟ್ರೀಯ ಕ್ರೀಡಾ ದಿನವನ್ನು ಆಚರಿಸಲು ನಿರ್ಧರಿಸಲಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ಪ್ರತಿಯೊಬ್ಬ ನಾಗರೀಕರು ಜಿಲ್ಲಾ ಕ್ರೀಡಾಂಗಣದಲ್ಲಿ ಕನಿಷ್ಠ ಒಂದು ಗಂಟೆ ಆಟದ ಮೈದಾನದಲ್ಲಿ ತೊಡಗಿಸಿಕೊಳ್ಳುವಂತೆ ಮಾಡಲಾಗಿದೆ. ಆ.29 ಮ್ಯಾರಥಾನ್ ಓಟ ಬೆಳಿಗ್ಗೆ 9 ಗಂಟೆಗೆ, ಆ.30 ರಂದು ಸೈಕಲ್ ಜಾಥಾ ಬೆಳಿಗ್ಗೆ 9 ಗಂಟೆಗೆ ಏರ್ಪಡಿಸಲಾಗಿದೆ. ಈ ಅಭಿಯಾನವನ್ನು ಹಾಕಿ ದಂತಕಥೆ ಮೇಜರ್ ಧ್ಯಾನ್‌ಚಂದ್ ಸ್ಮರಣಾರ್ಥವಾಗಿ ಆಯೋಜಿಸಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

# ಎಚ್1ಎನ್1 ತಡೆಗೆ ಮುನ್ನೆಚ್ಚರಿಕೆ ಅಗತ್ಯ

## ಸೋಂಕು ತಡೆಗಟ್ಟುವುದು ಪ್ರತಿಯೊಬ್ಬರ ಜವಾಬ್ದಾರಿ: ಡಾ||ಕಿಶೋರ್

• ಪ್ರಜೋದಯ ವರದಿ

**ಸಕಲೇಶಪುರ:** ಎಚ್1ಎನ್1 ಸೋಂಕು ಹರಡುವುದನ್ನು ತಡೆಗಟ್ಟುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ತಾಲ್ಲೂಕು ಆಡಳಿತ ವೈದ್ಯಾಧಿಕಾರಿ ಡಾ|| ಕಿಶೋರ್ ಅವರು ಹೇಳಿದರು.

ಕ್ರಾಫರ್ಡ್ ಆಸ್ಪತ್ರೆಯಲ್ಲಿ ಆರೋಗ್ಯ ಇಲಾಖೆಯಿಂದ ಅಂಗನವಾಡಿ ಹಾಗೂ ಆಶಾ ಕಾರ್ಯಕರ್ತೆಯರಿಗೆ ಆಯೋಜಿಸಿದ್ದ ಎಚ್1ಎನ್1 ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕೆಮ್ಮುವಾಗ ಅಥವಾ ಸೀನುವಾಗ ಕರವಸ್ತ್ರ ಇಲ್ಲವೇ ಮೊಣಕೈ ಬಳಸಿ ಬಾಯಿ-ಮೂಗನ್ನು ಮುಚ್ಚಿಕೊಳ್ಳಬೇಕು. ಮನೆಯಲ್ಲಿ ಗರ್ಭಿಣಿಯರು, ಮಕ್ಕಳು ಹಾಗೂ ವೃದ್ಧರು ಇದ್ದಲ್ಲಿ ಸೋಂಕಿನ ಲಕ್ಷಣಗಳಿರುವವರು ಅವರಿಂದ ಅಂತರ ಕಾಯ್ದುಕೊಂಡು, ಅಗತ್ಯವಿದ್ದರೆ ಮಾಸ್ಕ್ ಧರಿಸಬೇಕು. ಸ್ವಯಂ ಔಷಧ ಸೇವಿಸದೆ ವೈದ್ಯರನ್ನು ಸಂಪರ್ಕಿಸುವುದರೊಂದಿಗೆ ಸಾಕಷ್ಟು ನೀರು ಸೇವಿಸಬೇಕು. ಉಸಿರಾಟದ ತೊಂದರೆ ಕಂಡುಬಂದರೆ ತಕ್ಷಣ ವೈದ್ಯಕೀಯ ನೆರವು ಪಡೆಯಬೇಕು ಎಂದರು.

ತಾಲ್ಲೂಕಿನ 15 ಪ್ರಾಥಮಿಕ



ಆರೋಗ್ಯ ಕೇಂದ್ರಗಳಲ್ಲೂ ಅಗತ್ಯವಿರುವವರಿಗೆ ಮಾಸ್ಕ್ ಹಾಗೂ ಒಆರ್‌ಎಸ್ ಒದಗಿಸಲು ಕ್ರಮ ಕೈಗೊಳ್ಳಲಾಗುವುದು. ಗುಡ್ಡಗಾಡು ಹಾಗೂ ಆರೋಗ್ಯ ಸೇವೆ ತಲುಪಲು ಕಷ್ಟವಾಗುವ ಪ್ರದೇಶಗಳಲ್ಲಿ ಆಶಾ ಕಾರ್ಯಕರ್ತೆಯರ ಮೂಲಕ ಜಾಗೃತಿ ಮತ್ತು ಅಗತ್ಯ ಆರೋಗ್ಯ ಸೇವೆ ಒದಗಿಸಲಾಗುವುದು ಎಂದು ಮಾಹಿತಿ ನೀಡಿದರು.

ಮಕ್ಕಳ ಆರೋಗ್ಯ ಸಮಸ್ಯೆಗಳಿಗೆ 1098, ಎಚ್‌ಐವಿ ಹಾಗೂ ಲೈಂಗಿಕ ಸೋಂಕು ಗಳ ಮಾಹಿತಿ ಮತ್ತು ಸಲಹೆಗಾಗಿ 1097 ಸಹಾಯವಾಣಿ ಬಳಸ ಬಹುದು. ಹದಿಹರೆಯದ ಮಕ್ಕಳ ಆರೋಗ್ಯ ಸಮಸ್ಯೆಗಳ ಕುರಿತು ಪೋಷಕರು ಮುಕ್ತವಾಗಿ ಮಾತನಾಡಬೇಕು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಪ್ರತಿ ಗುರುವಾರ ನಡೆಯುವ ಸ್ನೇಹ ಕ್ಲಿನಿಕ್ ಸೇವೆ ಪಡೆಯಬಹುದು ಎಂದರು.

ಆಹಾರ ಸುರಕ್ಷತೆ ಬಗ್ಗೆಯೂ ಸಾರ್ವಜನಿಕರು ಎಚ್ಚರಿಕೆ ವಹಿಸಬೇಕು. ಹೋಟೆಲ್, ಪಾನಿಪುರಿ, ಗೋಬಿ ಮಂಚೂರಿ ಸೇರಿದಂತೆ ಆಹಾರ ಮಳಿಗೆಗಳಲ್ಲಿ ಆಹಾರ ಸುರಕ್ಷತಾ ಪರವಾನಗಿ ಹೊಂದಿರುವುದನ್ನು ಖಚಿತಪಡಿಸಿಕೊಂಡು ಆಹಾರ ಸೇವಿಸುವಂತೆ ಅವರು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಹಿರಿಯ ಆರೋಗ್ಯ ವೈದ್ಯಾಧಿಕಾರಿ ರಮೇಶ್, ಹಿರಿಯ ಆರೋಗ್ಯ ಮೇಲ್ವಿಚಾರಕಿ ರತ್ನಮ್ಮ, ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಆಶಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

# ಗ್ರಾ.ಪಂ. ಮೀಸಲಾತಿಯಲ್ಲಿ ರಾಜಕೀಯ ಹಸ್ತಕ್ಷೇಪ

• ಪ್ರಜೋದಯ ವರದಿ

**ಅರಸೀಕೆರೆ:** ಗ್ರಾಮ ಪಂಚಾಯಿತಿ ಚುನಾವಣೆಗೆ ಸಂಬಂಧಿಸಿದಂತೆ ಸರ್ಕಾರ ಪ್ರಕಟಿಸಿರುವ ಮೀಸಲಾತಿಯು ರಾಜಕೀಯ ಹಸ್ತಕ್ಷೇಪದಿಂದ ಕೂಡಿದೆ ಎಂದು ಜೆಡಿಎಸ್ ಮುಖಂಡರು ದೂರಿದರು.

ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಗಂಗಾಧರ್ ಹಾಗೂ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಅಶೋಕ್ ನೇತೃತ್ವದಲ್ಲಿ ಸುದ್ದಿಗೋಷ್ಠಿ ನಡೆಸಿದ ಜೆಡಿಎಸ್ ಮುಖಂಡರು, ಅರಸೀಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಗೆ ಸಂಬಂಧಿಸಿದಂತೆ ಪ್ರಕಟಿಸಲಾಗಿರುವ ಮೀಸಲಾತಿಯಲ್ಲಿ ಸಾಮಾಜಿಕ ನ್ಯಾಯವನ್ನು ಗಾಳಿಗೆ ತೂರಿ ಬಿಡಲಾಗಿದೆ ಎಂದು ಜರಿದರು.

ಕ್ಷೇತ್ರದ ಶಾಸಕರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾಗಿರುವ ಕೆ.ಎಂ. ಶಿವಲಿಂಗೇಗೌಡ ಅವರು ತಾಲ್ಲೂಕು ದಂಡಾಧಿಕಾರಿಗಳನ್ನ ತಮ್ಮ ತೋಟದ ಕಚೇರಿಗೆ ಕರೆಸಿಕೊಂಡು ತಮ್ಮ ಪಕ್ಷದ ಮುಖಂಡರ ಸಮ್ಮುಖದಲ್ಲಿ ಮೀಸಲಾತಿ ಪಟ್ಟಿಯನ್ನು ಸಿದ್ಧಪಡಿಸಿದ್ದಾರೆ



ಎಂದು ಆರೋಪಿಸಿದರು.

ಬಹುಸಂಖ್ಯಾತರಿರುವ ಕಡೆಗಳಲ್ಲಿ ಆ ಸಮಾಜಗಳನ್ನ ಪರಿಗಣಿಸದೆ ತಮ್ಮ ಸ್ವಾರ್ಥ ರಾಜಕಾರಣಕ್ಕಾಗಿ ಮೀಸಲಾತಿಯನ್ನು ದುರ್ಬಳಕೆ ಮಾಡಿಕೊಂಡಿರುವುದು ಎದ್ದು ಕಾಣುತ್ತಿದೆ, ರಾಜಕೀಯವಾಗಿ ಮಹಿಳೆಯರಿಗೆ ಸಾಮಾಜಿಕ ನ್ಯಾಯ ಸೇರಿದಂತೆ ಹಿಂದುಳಿದ ವರ್ಗಗಳಿಗೆ ಮೀಸಲಾತಿಯಲ್ಲಿ ಅನ್ಯಾಯವಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಪ್ರಸ್ತುತ ಪ್ರಕಟಗೊಂಡಿರುವ ಮೀಸಲಾತಿ ಪಟ್ಟಿಯನ್ನು ಹಿಂಪಡೆದು ಸಾಮಾಜಿಕ ನ್ಯಾಯದೊಂದಿಗೆ ಬದಲಿ ಪಟ್ಟಿಯನ್ನು ಜಿಲ್ಲಾಡಳಿತ ಪ್ರಕಟಿಸುವಂತೆ ಕೋರಿದ ಜೆಡಿಎಸ್ ಮುಖಂಡರು ಒಂದು ವೇಳೆ ಜಿಲ್ಲಾಡಳಿತ ನಮ್ಮ ಮನವಿಗೆ ಸ್ಪಂದಿಸದೆ ಹೋದರೆ ಕಾನೂನು ರೀತಿ ಹೋರಾಟ ನಡೆಸುವುದಾಗಿ ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ರಾಂಪುರ ಶೇಖರಪ್ಪ, ಜಿಲ್ಲಾ ಜನತಾ ಬಜಾರ್ ಸಹಕಾರ ಸಂಘದ ಅಧ್ಯಕ್ಷ ಮಂಜುನಾಥ್, ತಾಲ್ಲೂಕು ಜೆಡಿಎಸ್ ಅಧ್ಯಕ್ಷ ಚಂದ್ರಶೇಖರ್, ಮುಖಂಡರಾದ ಲಾಳನಕೆರೆ ಯೋಗೇಶ್, ನಗರಸಭೆ ನಿಕಟಪೂರ್ವ ಸದಸ್ಯ ಹರ್ಷವರ್ಧನ್ ಮತ್ತಿತರರು ಉಪಸ್ಥಿತರಿದ್ದರು.

# ಸಮಾನತೆಯ ಪರಿಕಲ್ಪನೆಯನ್ನು ಬಿತ್ತಿದ ಬ್ರಹ್ಮಶ್ರೀ

## ಗುರುಗಳ ಜೀವನ ಆದರ್ಶಪೂರ್ಣವಾದುದು

• ಪ್ರಜೋದಯ ವರದಿ

**ಅರಕಲಗೂಡು:** ಜಾತಿ, ದ್ವೇಷದ ಗೋಡೆಯನ್ನು ಒಡೆದು ಎಲ್ಲರಲ್ಲಿ ಭ್ರಾತೃತ್ವ ಮತ್ತು ಸಮಾನತೆಯ ಪರಿಕಲ್ಪನೆಯನ್ನು ಬಿತ್ತಿದ ಬ್ರಹ್ಮಶ್ರೀ ನಾರಾಯಣ ಗುರುಗಳ ಜೀವನ ಮತ್ತು ಹೋರಾಟ ಆದರ್ಶಪೂರ್ಣವಾದದ್ದು. ಎಲ್ಲರಲ್ಲೂ ಮಾನವೀಯತೆಯ ಸದಾಶಯವನ್ನು ಬೆಳೆಸುವಲ್ಲಿ ಗುರುವಿನ ಪಾತ್ರ ಮಹತ್ವದ್ದು ಎಂದು ಶಾಸಕ ಎ.ಮಂಜು ಅವರು ತಿಳಿಸಿದರು.

ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ತಾಲ್ಲೂಕು ಆಡಳಿತ ಹಮ್ಮಿಕೊಂಡಿದ್ದ ಬ್ರಹ್ಮಶ್ರೀ ನಾರಾಯಣ ಗುರು ಜಯಂತಿ ಆಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಬಾಲ್ಯದಲ್ಲಿ ನಾರಾಯಣಗುರು ಅವರನ್ನು ನಾಣು ಎಂದು ಕರೆಯುತ್ತಿದ್ದರು. ಕೃಷ್ಣ ವೈದ್ಯರ್ ಮತ್ತು ರಾಮನ್ ವೈದ್ಯರ್ ಅವರ ಮಾರ್ಗದರ್ಶನದಲ್ಲಿ ರಾಮಾಯಣ, ಮಹಾಭಾರತ, ಭಾಗವತ ಗ್ರಂಥಗಳ ಅಧ್ಯಯನ ನಡೆಸಿದರು. ನಾಟಿ ಔಷಧಿ



ತಯಾರು ಮಾಡುವುದನ್ನು ಕಲಿತು ವೈದ್ಯಕೀಯ ವೃತ್ತಿಯಲ್ಲಿಯೂ ಪ್ರಾವೀಣ್ಯತೆ ಪಡೆದಿದ್ದರು. ಶ್ರೀ ನಾರಾಯಣ ಗುರು ಯಾವುದೇ ಪ್ರತ್ಯೇಕ ಧರ್ಮಕ್ಕೆ ಮಾತ್ರ ಸೀಮಿತವಾದ ಯುಗ ಪುರುಷರಾಗದೆ ಎಲ್ಲಾ ಜಾತಿ ಧರ್ಮದ ನಾಯಕರಾಗಿದ್ದರು. ಎಲ್ಲರ ಸಮಸ್ಯೆಗಳಿಗೂ ಪರಿಹಾರ ಕಂಡುಕೊಳ್ಳಲು ಪ್ರಯತ್ನಿಸಿದ್ದರು ಎಂದರು.

ನಾರಾಯಣಗುರು ಅವರು, ವೇದಾಂತ ಉಪನಿಷತ್ತುಗಳು ಹಾಗೂ ಇತರ ಧರ್ಮಗ್ರಂಥಗಳಾದ ಕುರಾನ್, ಬೈಬಲ್‌ಗಳ ದೀರ್ಘ ಅಧ್ಯಯನ ಮತ್ತು ಚಿಂತನೆ ನಡೆಸಿ ಆ ಮುಖಾಂತರ ಅಂತರ್ಮುಖಿ ಜ್ಞಾನವನ್ನು ಗಳಿಸಲಾರಂಭಿಸಿದರು. ಆಧ್ಯಾತ್ಮಿಕ ದೀಕ್ಷೆಯನ್ನು ಪಡೆದ ನಂತರ ನಾರಾಯಣ ಗುರು ಜನರಿಗೆ ಹೆಚ್ಚು ನಿಕಟವಾಗತೊಡಗಿದರು. ಎಲ್ಲರೊಂದಿಗೂ ಸಮಾನವಾಗಿ ಬೆರೆಯತೊಡಗಿದರು. ತನ್ನ ಪ್ರದೇ ಶದ ಸುತ್ತು ಇರುವ ಪುಲಯ್ಯ, ಪರಯ್ಯ, ನಾಯಾಡಿ ಕೇರಿಗಳಿಗೆ ಹೋಗಿ ಜನರ ಕಷ್ಟಗಳನ್ನು ವಿಚಾರಿಸ ಲಾರಂಭಿಸಿದರು. ನೋವುಗಳಿಗೆ ಸ್ಪಂದಿಸಲಾರಂಭಿಸಿದರು. ಈ ನಿಟ್ಟಿನಲ್ಲಿ ಸಮಾಜದವರು ಹೆಚ್ಚು ವಿದ್ಯಾವಂತ ರಾಗಿ ನಾರಾಯಣಗುರು ಅವರ ಮಾರ್ಗದರ್ಶನದಲ್ಲಿ ಸಮಾಜ ಕಟ್ಟುವ ಕೆಲಸವನ್ನು ಕೈಗೊಳ್ಳಬೇಕೆಂದು ಹೇಳಿದರು.

ರವೀಂದ್ರನಾಥ ಠಾಗೋರ್, ಮಹಾತ್ಮ ಗಾಂಧಿ, ವಿನೋಬಾ ಭಾವೆ, ಸ್ವಾಮಿ ಶ್ರದ್ಧಾನಂದ, ವಕ್ಕಂ ಮೌಲವಿಯವರು ಇವರಿಂದ ಬಹಳಷ್ಟು ಪ್ರಭಾವಿತರಾಗಿದ್ದರು. ಕೆಳವರ್ಗದವರು ದಾರಿಯಲ್ಲಿ ಮುಕ್ತವಾಗಿ ನಡೆಯುವ ಹಕ್ಕಿಗಾಗಿ ವೈಕ್ಕಂ ಸತ್ಯಾಗ್ರಹ ನಡೆಸಿದರು. ಅದೇ ರೀತಿ ದುಂದುವೆಚ್ಚ, ಕಂದಾಚಾರ, ಪ್ರಾಣಿ ಬಲಿ, ಮದ್ಯಪಾನ, ಮಹಿಳಾ ಶೋಷಣೆ, ಶಿಕ್ಷಣ, ಇತ್ಯಾದಿ ವಿಷಯಗಳ ಬಗ್ಗೆ ಜನಜಾಗೃತಿ ಮೂಡಿಸಿದ್ದರು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ತಹಸೀಲ್ದಾರ್, ಸಮಾಜದ ಮುಖಂಡ ಕೃಷ್ಣ, ಕಂದಾಯ ಅಧಿಕಾರಿ ಸೋಮಶೇಖರ್ ಇನ್ನಿತರರು ಉಪಸ್ಥಿತರಿದ್ದರು.

## ಇಂದು ಜವಳಿ ಉದ್ದಿಮೆದಾರರಿಗೆ ಒಂದು ದಿನದ ಕಾರ್ಯಾಗಾರ

**ಹಾಸನ:** ಜವಳಿ ವಲಯದ ರಫ್ತು ಉದ್ದಿಮೆದಾರರಿಗೆ ಒಂದು ದಿನದ ರಫ್ತು ಪ್ರೋತ್ಸಾಹಕ ಕಾರ್ಯಾಗಾರವನ್ನು ಆ.29 ರಂದು ಬೆಳಿಗ್ಗೆ 10 ಗಂಟೆಗೆ ಕೆನರಾ ಬ್ಯಾಂಕ್, ಸ್ವ-ಉದ್ಯೋಗ ತರಬೇತಿ ಕೇಂದ್ರ, ಕೆ.ಐ.ಎ.ಡಿ.ಬಿ ಇಂಡಸ್ಟ್ರೀಯಲ್ ಏರಿಯಾ ಹೊಳೆನರಸೀಪುರ ರಸ್ತೆ ಹಾಸನ ಇಲ್ಲಿ ಆಯೋಜಿಸಲಾಗಿದೆ.

ಜಿಲ್ಲಾಧಿಕಾರಿ ಕೆ.ಎಸ್ ಲತಾಕುಮಾರಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದು, ಕೈಮಗ್ಗ ಮತ್ತು ಜವಳಿ ಇಲಾಖೆಯ ನಿರ್ದೇಶಕರು ಹಾಗೂ ಜವಳಿ ಅಭಿವೃದ್ಧಿಯ ಆಯುಕ್ತ ಎ.ಬಿ. ಬಸವರಾಜು ಅವರು ಕಾರ್ಯಕ್ರಮ ಉದ್ಘಾಟನೆ ಮಾಡಲಿದ್ದಾರೆ, ವಿಶೇಷ ಆಹ್ವಾನಿತರಾಗಿ ಜಿ.ಪಂ. ಸಿಇಒ ಶುಭಂ ಶುಕ್ಲ ಅವರು ಭಾಗವಹಿಸಲಿದ್ದಾರೆ.

ಕೈಮಗ್ಗ ಮತ್ತು ಜವಳಿ ಇಲಾಖೆಯ ಅಪರ ನಿರ್ದೇಶಕ ಸಿ.ಎಸ್. ಯೋಗೇಶ್ ಇನ್ನಿತರರು ಭಾಗವಹಿಸಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

# ಆರೋಗ್ಯ ಉತ್ತಮವಾಗಿದ್ದರೆ ಸಾಧನೆ ಸಾಧ್ಯ

• ಪ್ರಜೋದಯ ವರದಿ

**ಹಳೇಬೀಡು:** ಆರೋಗ್ಯ ಚೆನ್ನಾಗಿದ್ದರೆ, ಜೀವನದಲ್ಲಿ ಏನಾನ್ನಾದರೂ ಸಾಧಿಸಬಹುದು. ಈ ನಿಟ್ಟಿನಲ್ಲಿ ಉದ್ಯಮಿ ಎಚ್.ಎನ್.ಯೋಗೀಶ್ ಸ್ವಂತ ಖರ್ಚಿನಿಂದ ಆಸ್ಪತ್ರೆಗೆ ಹೆಚ್ಚುವರಿ ವಾರ್ಡ್ ನಿರ್ಮಿಸಿ ಕೊಟ್ಟಿರುವುದು ಶ್ಲಾಘನೀಯ ಎಂದು ಹಿರಿಯ ವೈದ್ಯಾಧಿಕಾರಿ ಡಾ.ಎ.ಎಸ್. ಚಂದನ್ ಕುಮಾರ್ ಹೇಳಿದರು.

ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ತಮ್ಮದೊಂದು ಕಾಣಿಕೆ ನೀಡಬೇಕು ಎಂದು ಹಳೇಬೀಡಿನ ಉದ್ಯಮಿ ಹಾಗೂ ನಿವೃತ್ತ ಪತ್ರಕರ್ತ ಎಚ್.ಎನ್.ಯೋಗೀಶ್ ಅವರು ಹಳೇಬೀಡು ಸರ್ಕಾರಿ ಸಮುದಾಯ ಆಸ್ಪತ್ರೆಯಲ್ಲಿ ಸ್ವಂತ ಖರ್ಚಿನಿಂದ ನಿರ್ಮಿಸಿರುವ ಹೆಚ್ಚುವರಿ ವಾರ್ಡ್ ಕಟ್ಟಡದ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ಜನರು ಆರೋಗ್ಯದತ್ತ ಹೆಚ್ಚಿನ ಗಮನ ಹರಿಸಬೇಕು. ಕಾಯಿಲೆ ಆರಂಭದ ಹಂತದಲ್ಲಿಯೇ ವೈದ್ಯರನ್ನು ಸಂಪರ್ಕಿಸಿದರೆ ಗುಣಪಡಿಸಿಕೊಳ್ಳಲು ಅನುಕೂಲವಾಗುತ್ತದೆ ಎಂದರು.



ತಂದೆ, ತಾಯಿ ಹಾಗೂ ಅಕ್ಕ, ಭಾವನ ಸವಿ ನೆನಪಿಗಾಗಿ ಸಮಾಜಕ್ಕೆ ಉಪಯುಕ್ತವಾದ ಸೇವೆ ಮಾಡಬೇಕು ಎಂಬುದು ಮಹಾದಾಸೆಯಾಗಿತ್ತು. ಈ ನಿಟ್ಟಿನಲ್ಲಿ ಚಿಂತನೆ ಮಾಡಿದಾಗ ಸರ್ಕಾರಿ ಆಸ್ಪತ್ರೆಗೆ ವಾರ್ಡ್ ನಿರ್ಮಿಸಿಕೊಡುವ ಆಲೋಚನೆ ಮೂಡಿತು. ಈಗ ಕೆಲಸ ಕಾರ್ಯಗತವಾಗಿರುವುದರಿಂದ ಮನಸ್ಸಿಗೆ ಸಂತಸವಾಯಿತು. ರೋಗಿಗಳಿಗಾಗಿ ನಾವು ನಿರ್ಮಿಸಿರುವ ವಾರ್ಡನ್ನು ಜನರು ಸದುಪಯೋಗ ಮಾಡಿಕೊಂಡರೆ, ನಮ್ಮ ಮನಸ್ಸು ಪ್ರಫುಲ್ಲವಾಗುತ್ತದೆ ಎಂದು ಯೋಗೀಶ್ ಅವರು ಹೇಳಿದರು.

ನಿವೃತ್ತ ಉಪ ಪೊಲೀಸ್ ವರಿಷ್ಠಾಧಿಕಾರಿ ಎಚ್.ಎನ್.ಪಂಚಾಕ್ಷರಪ್ಪ ಅವರು ಮಾತನಾಡಿ, ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಎಲ್ಲರೂ ಸಹಕಾರ ಕೊಡಬೇಕು. ಉಳ್ಳವರು ಆರೋಗ್ಯ ಕ್ಷೇತ್ರಕ್ಕೆ ಹೆಚ್ಚಿನ ಸೇವೆ ನೀಡಬೇಕು ಎಂದರು.

ದಿವಂಗತರಾಗಿರುವ ತಾಯಿ ಚನ್ನಮ್ಮ ತಂದೆ ನಂಜೇಗೌಡ (ಚೆನ್ನಳ್ಳಿ ಮೇಸ್ತ್ರು) ಹಾಗೂ ಅಕ್ಕ ಬೀರೂರಿನ ಸರೋಜಮ್ಮ, ಭಾವ ಮಹೇಶ್ವರಪ್ಪ ಅವರ ಸ್ಮರಣೆಗಾಗಿ ಆಸ್ಪತ್ರೆ ಕಟ್ಟಡದ 1ನೇ ಹಂತಸ್ತಿನಲ್ಲಿ ಯೋಗೀಶ್ 20 ಲಕ್ಷ ರೂ. ವೆಚ್ಚದ ವಾರ್ಡ್ ಕಟ್ಟಡ ನಿರ್ಮಿಸಿದ್ದಾರೆ. ವಾರ್ಡಿಗೆ ತೆರಳಲು ಸುಸಜ್ಜಿತ ಮೆಟ್ಟಿಲುಗಳನ್ನು ಸಹ ನಿರ್ಮಿಸಲಾಗಿದೆ.

ಗಾಳಿ, ಬೆಳಕು ಬರುವಂತಹ ವಿಶಾಲವಾದ ಕಿಟಕಿ ಬಾಗಿಲು, ವ್ಯವಸ್ಥಿತವಾದ ಶೌಚಾಲಯ ಕಟ್ಟಡದಲ್ಲಿದೆ. 8ರಿಂದ 10 ಮಂದಿ ಒಳ ರೋಗಿಗಳಿಗೆ ಚಿಕಿತ್ಸೆ ಮಾಡಲು ಕಟ್ಟಡದಲ್ಲಿ ಅವಕಾಶವಿದೆ. ಹಳೇಬೀಡು ಸಮುದಾಯ ಆಸ್ಪತ್ರೆಗೆ ಆಗಮಿಸುವ ರೋಗಿಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ. ಈ ಸಂದರ್ಭದಲ್ಲಿ ಹೆಚ್ಚುವರಿ ವಾರ್ಡ್ ಅಗತ್ಯವಿತ್ತು. ಎಚ್.ಎನ್.ಯೋಗೀಶ್ ಉತ್ತಮ ಕೆಲಸ ನಿರ್ವಹಿಸಿದ್ದಾರೆ ಎಂಬ ಮಾತು ಸಾರ್ವಜನಿಕರಿಂದ ಕೇಳಿ ಬಂದಿತು.

ಆಡಳಿತ ವೈದ್ಯಾಧಿಕಾರಿ ಡಾ.ಎಚ್.ಆರ್.ಅನಿಲ್‌ಕುಮಾರ್, ನಿವೃತ್ತ ಶಿಕ್ಷಕ ಎಚ್.ಎಂ.ಶಿವಶಂಕರಪ್ಪ, ವೀರಶೈವ ಲಿಂಗಾಯಿತ ತಾಲ್ಲೂಕು ಯುವ ಘಟಕ ಅಧ್ಯಕ್ಷ ಎಚ್.ಸಿ.ಚೇತನ, ಮುಖಂಡರಾದ ಮಿಲ್ ಮಲ್ಲಣ್ಣ, ಜಯಕುಮಾರ್, ಮಂಜುನಾಥ್, ಬಿ.ಎಸ್. ಸೋಮಶೇಖರ್, ಮಲ್ಲಿಕಾರ್ಜುನ ಇತರರು ಭಾಗಹಿಸಿದ್ದರು.

# ಅರಕಲಗೂಡು: ಜಾಬ್ ಕಾರ್ಡ್ ಮೇಳ ಅರಿವು ಅಭಿಯಾನ

## ಅರ್ಜಿ ಸಲ್ಲಿಸಿದ 15 ದಿನಗಳೊಳಗಾಗಿ ಕಡ್ಡಾಯ ಉದ್ಯೋಗ

• ಪ್ರಜೋದಯ ವರದಿ

**ಅರಕಲಗೂಡು:** ಗ್ರಾಮೀಣ ಭಾಗದ ದುಡಿಯುವ ಕೈಗಳಿಗೆ ಉದ್ಯೋಗ ಕಲ್ಪಿಸುವ ಮೂಲಕ ವಲಸೆ ತಡೆಗಟ್ಟುವ ಉದ್ದೇಶ ಹೊಂದಿರುವ ವಿಜಿಆರ್‌ಎಂಜಿ ಯೋಜನೆಯ ಕುರಿತು ತಾಲೂಕಿನ ಬಸವಾಪಟ್ಟಣ ಗ್ರಾಮ ಪಂಚಾಯಿತಿ ವತಿಯಿಂದ ಶುಕ್ರವಾರ ಜಾಬ್ ಕಾರ್ಡ್ ಮೇಳ ಹಾಗೂ ಅರಿವು ಅಭಿಯಾನ ಕಾರ್ಯಕ್ರಮ ನಡೆಯಿತು.

ತಾಲೂಕು ಪಂಚಾಯಿತಿ ಐಇಸಿ ಸಂಯೋಜಕ ಬಿ.ಎನ್.ಮಂಜುನಾಥ್ ಮಾತನಾಡಿ, ವಿಜಿಆರ್‌ಎಂ ಜಿ ಯೋಜನೆಯ ಮೂಲ ಉದ್ದೇಶ ಗ್ರಾಮೀಣ ಪ್ರದೇಶದಿಂದ ನಡೆಯುವ ವಲಸೆಯನ್ನು ತಡೆಗಟ್ಟುವುದು ಹಾಗೂ ದುಡಿಯುವ ಕೈಗಳಿಗೆ ಸ್ಥಳೀಯವಾಗಿಯೇ ಉದ್ಯೋಗ ಒದಗಿಸುವುದಾಗಿದೆ. ಯೋಜನೆಯಡಿ ಗಂಡು-ಹೆಣ್ಣಿಗೆ ಸಮಾನವಾಗಿ ದಿನಕ್ಕೆ 382 ರೂ ಕೂಲಿ ದೊರೆಯಲಿದ್ದು, ಕೂಲಿ ಕೆಲಸಕ್ಕಾಗಿ ಅರ್ಜಿ ಸಲ್ಲಿಸಿದ 15 ದಿನಗಳೊಳಗಾಗಿ ಕಡ್ಡಾಯವಾಗಿ ಉದ್ಯೋಗ ನೀಡಲಾಗುತ್ತದೆ. ಒಂದು ಕುಟುಂಬಕ್ಕೆ ಒಂದು ಆರ್ಥಿಕ ವರ್ಷದಲ್ಲಿ ಗರಿಷ್ಠ 125 ದಿನಗಳ



ಉದ್ಯೋಗ ದೊರೆಯಲಿದ್ದು, ಒಟ್ಟು 47,750 ರೂ. ವರೆಗೆ ಕೂಲಿ ಪಡೆಯಬಹುದಾಗಿದೆ.

ಇದಲ್ಲದೆ ವೈಯಕ್ತಿಕ ಸೌಲಭ್ಯಗಳಿಗಾಗಿ ಒಂದು ಕುಟುಂಬಕ್ಕೆ 5 ಲಕ್ಷ ರೂ ವರೆಗೆ ನೆರವು ದೊರೆಯುವ ಅವಕಾಶವಿದೆ ಎಂದು ತಿಳಿಸಿದರು.

ತಾಲ್ಲೂಕು ಪಂಚಾಯಿತಿ ಸಹಾಯಕ ನಿರ್ದೇಶಕ ವಿ.ಎನ್.ಪ್ರದೀಪ್ ಮಾತನಾಡಿ, ಯೋಜನೆಯಡಿ ದನದ ಕೊಟ್ಟಿಗೆ, ಕುರಿ ಶೆಡ್, ಹಂದಿ ಶೆಡ್, ಕೋಳಿ ಶೆಡ್, ಎರೆಹುಳು ಘಟಕ, ತೆರೆದ ಬಾವಿ, ಬೋರ್‌ವೆಲ್ ರೀಚಾರ್ಜ್ ಪಿಟ್, ಸೋಕ್ ಪಿಟ್ ಹಾಗೂ ಪಿ.ಎಂ.ಎ.ವೈ. ಯೋಜನೆಯಡಿ ಮನೆ ಸೇರಿದಂತೆ ವಿವಿಧ ವೈಯಕ್ತಿಕ ಕಾಮಗಾರಿಗಳ ಸೌಲಭ್ಯ ಪಡೆಯಬಹುದು ಎಂದರು.

ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಎಂ.ಎಸ್.ದಿವಾಕರ್ ಮಾತನಾಡಿ, ರಸ್ತೆ, ಚರಂಡಿ, ಬೂದು ನೀರು ನಿರ್ವಹಣೆ, ಸಾಮಾಜಿಕ ಸೋಕ್ ಪಿಟ್, ಸಾಮಾಜಿಕ ಬೋರ್‌ವೆಲ್ ರೀಚಾರ್ಜ್ ಪಿಟ್, ವಿಪತ್ತು ನಿರ್ವಹಣಾ ಕಾಮಗಾರಿಗಳು ಹಾಗೂ ಚೆಕ್‌ಡ್ಯಾಂ ಸೇರಿದಂತೆ ವಿವಿಧ ಸಮುದಾಯ ಕಾಮಗಾರಿಗಳನ್ನು ಯೋಜನೆಯಡಿ ಕೈಗೊಳ್ಳಬಹುದಾಗಿದೆ. ಜಾಬ್ ಕಾರ್ಡ್‌ಗಳ ಮಹತ್ವದ ಕುರಿತು ಸಾರ್ವಜನಿಕರು ಅರಿವು ಹೊಂದಬೇಕು. ತಮ್ಮ ಜಾಬ್ ಕಾರ್ಡ್‌ಗಳನ್ನು ಯಾವುದೇ ಕಾರಣಕ್ಕೂ ಬೇರೆಯವರಿಗೆ ನೀಡಬಾರದು. ಜಾಬ್ ಕಾರ್ಡ್ ಬೇರೆಯವರ ಕೈಗೆ ನೀಡುವುದರಿಂದ ಯೋಜನೆಯಡಿ ದೊರೆಯುವ ಉದ್ಯೋಗ ಮತ್ತು ಇತರೆ ಸೌಲಭ್ಯಗಳಿಂದ ವಂಚಿತರಾಗುವ ಸಾಧ್ಯತೆಯಿದೆ ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಕರಪತ್ರಗಳನ್ನು ವಿತರಿಸುವ ಮೂಲಕ ಗ್ರಾಮಸ್ಥರಿಗೆ ಯೋಜನೆಯಡಿ ದೊರೆಯುವ ಉದ್ಯೋಗ ಹಾಗೂ ವಿವಿಧ ಸೌಲಭ್ಯಗಳ ಕುರಿತು ಮಾಹಿತಿ ನೀಡಲಾಯಿತು. ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಎಂ.ಇ. ಸುರೇಶ, ಸಿಬ್ಬಂದಿ, ಅಂಗನವಾಡಿ ಕಾರ್ಯಕರ್ತೆಯರು, ಸ್ವಸಹಾಯ ಸಂಘಗಳ ಸದಸ್ಯರು ಸೇರಿ ಇನ್ನಿತರರು ಪಾಲ್ಗೊಂಡಿದ್ದರು.

# ಜೈನ ಬಸದಿಯಲ್ಲಿ ಪುಣ್ಯಪ್ರಭಾವನಾ



• ಪ್ರಜೋದಯ ವರದಿ

**ಹಳೇಬೀಡು:** ಮಾನಸ್ತಂಭದ ಮೇಲೆ ಚತುರ್ಮುಖ ಜಿನಬಿಂಬ ಹಾಗೂ ಪುಣ್ಯಪ್ರಭಾವನಾ ಕಾರ್ಯಕ್ರಮ ಅಡಗೂರು ಜೈನ ಬಸದಿಯಲ್ಲಿ ಶುಕ್ರವಾರ ಆರಂಭವಾಯಿತು.

ರತ್ನತ್ರಯ ಸೂತ್ರಧಾರಣೆಯೊಂದಿಗೆ ಧಾರ್ಮಿಕ ಧ್ವಜಾರೋಹಣ ನಡೆಯಿತು. ಶಾಂತಿ ಹೋಮ ನೆರವೇರಿಸಿ ಜಗತ್ತಿನ ಸಕಲ ಜೀವಿಗಳಿಗೆ ಒಳಿತಾಗಲಿ ಎಂದು ಪ್ರಾರ್ಥಿಸಿದರು. ಶ್ರಾವಕಿಯರು ಮೆರವಣಿಗೆಯಲ್ಲಿ ತೆರಳಿ ಕಳಸ ನೀರು ತಂದರು. ಸಮಾಜದ ಮುಖಂಡರು ದೀಪ ಪ್ರಜ್ವಲಿಸಿದರು. ನಂತರ 81 ಕಳಸದಲ್ಲಿ ವೇದಿ, ಕಳಸ, ಶಿಖರ ಮಾನಸ್ತಂಭ ಶುದ್ಧಿಕರಿಸಲಾಯಿತು. ವಾಸ್ತುವಿಧಾನ, ಯಾಗಮಂಡಲ ಆರಾಧನೆ ನೆರವೇರಿಸಿ, ಆರತಿ ಕಾರ್ಯಕ್ರಮ ನಡೆಸಲಾಯಿತು. ವಿವಿಧ ಊರಿನಿಂದ ಆಗಮಿಸಿದ ಜಿನ ಭಕ್ತರು ಪೂಜಾ ವಿಧಾನಗಳನ್ನು ಕಣ್ತುಂಬಿಕೊಂಡರು.

ಪ್ರತಿಷ್ಠಾಚಾರ್ಯ ನಂದಕುಮಾರ ಶಾಸ್ತ್ರಿ, ಪುರೋಹಿತರಾದ ಎ. ಜೆ.ನಾಗರಾಜು, ವಿಮಲ್ ಪಂಡಿತ್, ಚಂದ್ರನಾಥ, ಶೀತಲ್ ಪಂಡಿತ್ ಪೂಜಾ ವಿಧಾನ ನೆರವೇರಿಸಿದರು.

ಈ ಸಂದರ್ಭದಲ್ಲಿ ಎ.ಬಿ.ಕಾಂತರಾಜು, ಶಾಮಲ ಜಿನರಾಜ್, ಎ.ಎಸ್.ನಾಗೇಂದ್ರಕುಮಾರ್, ಎ.ಎನ್. ಶಶಿಕುಮಾರ್, ನಾಗಚಂದ್ರ, ಎ.ಎಸ್ .ದಾನಪ್ಪ, ಮನ್ಮಥರಾಜು, ಸುಮತಿ ಕುಮಾರ್, ಕರುಣಾಕರ, ಪಷ್ಪಾ ರತ್ನರಾಜು, ಸುಧಾ ವಿಜಯ ಕುಮಾರ್, ರೇಖಾ ಧವನ್, ಭಾರತಿ ಅತುಲ್ ಜೈನ್, ಪತ್ರಕರ್ತ ಎಚ್. ಎಸ್.ಅನಿಲ್‌ಕುಮಾರ್ ಇನ್ನಿತರರು ಪಾಲ್ಗೊಂಡಿದ್ದರು.

## ಪ್ರತಿದಿನ ಒಂದು ಗಂಟೆ ದೈಹಿಕ ಶಿಕ್ಷಣ ತರಗತಿಗಳು ನಡೆಯಬೇಕು: ಶಾಸಕ ಎ.ಮಂಜು

# ಪ್ರತಿಭೆ ಹೊರಹಾಕಲು ವಿದ್ಯಾರ್ಥಿಗಳಿಗೆ ಅವಕಾಶಗಳಿಲ್ಲ

• ಪ್ರಜೋದಯ ವರದಿ

**ಅರಕಲಗೂಡು:** ಪ್ರಸ್ತುತ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ತಲೆಗೆ ಕೇವಲ ಪಠ್ಯಾಭ್ಯಾಸವನ್ನು ತುಂಬುವ ಕೆಲಸವಾಗುತ್ತಿದೆ. ಪ್ರತಿದಿನ ಕನಿಷ್ಠ ಒಂದು ಗಂಟೆಯಾದರೂ ದೈಹಿಕ ಶಿಕ್ಷಣ ತರಗತಿಗಳು ನಡೆಯುವಂತಾಗಬೇಕು ಎಂದು ಶಾಸಕ ಎ. ಮಂಜು ಸೂಚನೆ ನೀಡಿದರು.

ಶುಕ್ರವಾರ ಪಟ್ಟಣದ ಬಾಲಕರ ಪದವಿ ಪೂರ್ವ ಕಾಲೇಜು ಆವರಣದಲ್ಲಿ ಹಮ್ಮಿಕೊಂಡಿದ್ದ 2026-27 ನೇ ಸಾಲಿನ ತಾಲೂಕು ಮಟ್ಟದ ಕ್ರೀಡಾಕೂಟಕ್ಕೆ ಪಾರಿವಾಳವನ್ನು ಹಾರಿಬಿಡುವ ಮೂಲಕ ಚಾಲನೆ ನೀಡಿ ಮಾತನಾಡಿದ ಅವರು, ವಿದ್ಯಾರ್ಥಿಗಳ ಜೀವನದಲ್ಲಿ ವಿದ್ಯಾಭ್ಯಾಸ ಮತ್ತು ದೈಹಿಕ ಆರೋಗ್ಯ ಬಹಳ ಮುಖ್ಯ, ಓದಿನ ಮೂಲಕ ತಮ್ಮ ಗುರಿಯನ್ನು ಗುರುತಿಸಿಕೊಂಡು ಅದನ್ನು ಸಾಧಿಸುವತ್ತ ಗಮನ ಹರಿಸಬೇಕು ಎಂದು ಕಿವಿಮಾತು ಹೇಳಿದರು.

ವಿದ್ಯಾರ್ಥಿಗಳು ಬೇಡವಾದ ವಿಷಯಗಳತ್ತ ಗಮನಹರಿಸದೆ ಸಮಗ್ರ ಚಿತ್ತದಿಂದ ಪಠ್ಯಗಳತ್ತ ಗಮನಹರಿಸುವ ಮೂಲಕ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ಅದೇ



ನಿಟ್ಟಿನಲ್ಲಿ ದೈಹಿಕ ಹಾಗೂ ಮಾನಸಿಕ ಆರೋಗ್ಯಕ್ಕೂ ಆದ್ಯತೆ ನೀಡುವುದು ಅಗತ್ಯ ಎಂದರಲ್ಲದೆ, ಗುರು- ಹಿರಿಯರು ಹಾಗೂ ಪೋಷಕರಿಗೆ ಮೊದಲು ಗೌರವ ನೀಡುವುದನ್ನು ಕಲಿಯಬೇಕು ಎಂದರು.

ವಿದ್ಯಾರ್ಥಿಗಳಲ್ಲಿ ಸಾಕಷ್ಟು ಪ್ರತಿಭೆ ಇದ್ದರೂ, ಅದನ್ನು ಹೊರಹಾಕಲು ಸೂಕ್ತ ಅವಕಾಶಗಳು ಸಿಗುತ್ತಿಲ್ಲ. ಸರ್ಕಾರಿ ಕಾಲೇಜುಗಳಲ್ಲಿ ಓದುತ್ತಿರುವ ಬಹುತೇಕ ಮಂದಿ ಗ್ರಾಮೀಣ ಭಾಗದ ವಿದ್ಯಾರ್ಥಿಗಳೇ ಆಗಿರುತ್ತಾರೆ. ಇವರಲ್ಲಿ ಶಿಸ್ತು, ಆರೋಗ್ಯ ಹಾಗೂ ಕ್ರೀಡಾ ಮನೋಭಾವ ಮೂಡಿಸಿದರೆ ನಂತರದಲ್ಲಿ ಅವರು ಬೆಳೆಸಿಕೊಳ್ಳಲು ಸಾಧ್ಯವಾಗುತ್ತದೆ ಎಂದು ಅವರು ಅಭಿಪ್ರಾಯಪಟ್ಟರು.

ಕ್ರೀಡಾಕೂಟದ ಆಯೋಜನೆಯನ್ನು ಹೆಬ್ಬಾಲೆ ಪದವಿ ಪೂರ್ವ ಕಾಲೇಜು ವಹಿಸಿತ್ತು. ತಾಲ್ಲೂಕಿನ 21 ಪಿಯು ಕಾಲೇಜಿನ ವಿದ್ಯಾರ್ಥಿಗಳು ವಿವಿಧ ಕ್ರೀಡೆಗಳಲ್ಲಿ ಭಾಗವಹಿಸಿದ್ದರು. ಸ್ಪರ್ಧೆಗಳಲ್ಲಿ ಭಾಗವಹಿಸಿದ್ದ ವಿದ್ಯಾರ್ಥಿಗಳು ಉತ್ಸಾಹದಿಂದ ಕ್ರೀಡಾ ಸ್ಫೂರ್ತಿಯನ್ನು ಮೆರೆದು ಉತ್ತಮ ಪ್ರದರ್ಶನ ನೀಡಿದರು. ವಿವಿಧ ಆಟಗಳಲ್ಲಿ ವಿಜೇತರಾದ ಕ್ರೀಡಾಪಟುಗಳಿಗೆ ಬಹುಮಾನ ಹಾಗೂ ಪ್ರಶಸ್ತಿ ಪತ್ರಗಳನ್ನು ವಿತರಣೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ತಾಲ್ಲೂಕು ಜೆಡಿಎಸ್ ಅಧ್ಯಕ್ಷ ಹೊನ್ನವಳ್ಳಿ ಸತೀಶ್, ಮಾಜಿ ತಾಲ್ಲೂಕು ಪಂಚಾಯಿತಿ ಅಧ್ಯಕ್ಷ ನರಸೇಗೌಡ, ಮಾಜಿ ಪಟ್ಟಣ ಪಂಚಾಯಿತಿ ಅಧ್ಯಕ್ಷ ಮಂಜುಶೆಟ್ಟಿಗೌಡ, ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಪಿ. ನಾರಾಯಣ್, ಹೆಬ್ಬಾಲೆ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಲಕ್ಷ್ಮಣ್, ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಪುಟ್ಟರಾಜು, ತಾಲ್ಲೂಕು ಪದವಿ ಪೂರ್ವ ಕಾಲೇಜು ಉಪನ್ಯಾಸಕರ ಸಂಘದ ಅಧ್ಯಕ್ಷ ಎಂ. ಆರ್.ಹರೀಶ್, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಉಪಾಧ್ಯಕ್ಷ ಹೆಚ್.ಆರ್.ಗಿರೀಶ್, ಪ್ರೌಢ ಶಾಲಾ ದೈಹಿಕ ಶಿಕ್ಷಕರ ಸಂಘದ ಅಧ್ಯಕ್ಷ ಸಂಜೀವ್ ಕುಮಾರ್, ಹೆಬ್ಬಾಲೆ ಸರ್ಕಾರಿ ಪದವಿ ಪೂರ್ವ ಕಾಲೇಜು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಎಂ. ಎನ್.ಜಯರಾಮ್, ಸದಸ್ಯರಾದ ಕೃಷ್ಣೇಗೌಡ, ಲಕ್ಷ್ಮೀಶ, ಬಿ.ಎಸ್. ರಾಜೇಗೌಡ, ಪತ್ರಕರ್ತರ ಸಂಘದ ಅಧ್ಯಕ್ಷ ಪಿ.ಶಿವಕುಮಾರ್, ವಿಜಯ ಕುಮಾರ್, ಪಿ.ಬಿ.ವಿರುಪಾಕ್ಷ, ವಿವಿಧ ಕಾಲೇಜಿನ ಪ್ರಾಂಶುಪಾಲರುಗಳು ಹಾಗೂ ಉಪನ್ಯಾಸಕರುಗಳು, ದೈಹಿಕ ಶಿಕ್ಷಣ ಶಿಕ್ಷಕರು, ಕ್ರೀಡಾಪಟುಗಳು ವಿದ್ಯಾರ್ಥಿಗಳು ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಕರ್ನಾಟಕ ಸರ್ಕಾರ ತೋಟಗಾರಿಕೆ ಇಲಾಖೆ

ತೋಟಗಾರಿಕೆ ಉಪ ನಿರ್ದೇಶಕರು, ರಾಜ್ಯವಲಯ ರವರ ಕಛೇರಿ, ಹಾಸನಾಂಬ ದೇವಾಲಯದ ರಸ್ತೆ, ಸಂತೆಪೇಟೆ, ಹಾಸನ-573201

email:ddhsshassan@gmail.com Ph: 08172-269995

ಸಂ:ಹಿಸತೋನಿ:ರಾವ:ಹಾ:ತಾಸ:08:2026-27 ದಿನಾಂಕ:28-08-2026

**ಇ-ಹರಾಜು/ ಮುಚ್ಚಿದ ಲಕೋಟೆ ಕಂ ಬಹಿರಂಗ ಹರಾಜು ಪ್ರಕಟಣೆ**

ಈ ಮೂಲಕ ಸಾರ್ವಜನಿಕರಿಗೆ ಹಾಗೂ ಹಣ್ಣಿನ ವ್ಯಾಪಾರಿಗಳಿಗೆ ತಿಳಿಯಪಡಿಸುವುದೇನೆಂದರೆ, ಹಾಸನ ಜಿಲ್ಲೆಯ ತೋಟಗಾರಿಕೆ ಕ್ಷೇತ್ರಗಳಲ್ಲಿನ ದಿನಾಂಕ:01-07-2026 ರಿಂದ ದಿನಾಂಕ:31-12-2026ರ ಅವಧಿಯ ಸಪೋಟ ಮತ್ತು ಸೀಬೆ ಫಸಲನ್ನು ರೂಢಿಸಿಕೊಳ್ಳಲು ನಿಯಮಾನುಸಾರ ಇ-ಹರಾಜು ಮತ್ತು ಮುಚ್ಚಿದ ಲಕೋಟೆ ಕಂ ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡಲಾಗುವುದು. ಇಚ್ಛೆಯುಳ್ಳವರು ಕ್ಷೇತ್ರಗಳಲ್ಲಿನ ಫಸಲು ವೀಕ್ಷಿಸಿ ನಿಬಂಧನೆ ಮತ್ತು ಷರತ್ತುಗಳು ಒಪ್ಪಿಗೆಯಾದಲ್ಲಿ KPP-ಪೋರ್ಟಲ್ (https://kppp.karnataka.gov.in) ನಲ್ಲಿ ಇ-ಹರಾಜು ಪ್ರಕ್ರಿಯೆಯಲ್ಲಿ ಭಾಗವಹಿಸಬಹುದು. ಇ-ಹರಾಜು ಪ್ರಕ್ರಿಯೆ ದಿನಾಂಕ:28-08-2026 ರಿಂದ ನಡೆಯಲಿದ್ದು, ಬಿಡ್ದುದಾರರು ಆನ್ ಲೈನ್ ನಲ್ಲಿ ದಾಖಲಾತಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ:8-09-2026 ರಂದು ಅಪರಾಹ್ನ 5.00 ಗಂಟೆಯಾಗಿರುತ್ತದೆ. ಲೈವ್ ಹರಾಜು ದಿನಾಂಕ:9-09-2026 ರಿಂದ ದಿನಾಂಕ:10-09-2026 ರವರೆಗೆ ಜಾರಿಯಲ್ಲಿರುತ್ತದೆ. ಮೊದಲನೇ ಬಾರಿ ಬಿಡ್ಡು ಆಗದ ತೋಟಗಾರಿಕೆ ಕ್ಷೇತ್ರಗಳ ಸಪೋಟ ಮತ್ತು ಸೀಬೆ ಫಸಲನ್ನು ಆಯಾ ತೋಟಗಾರಿಕೆ ಕ್ಷೇತ್ರಗಳಲ್ಲಿ ನಿಗದಿಪಡಿಸಿದ ದಿನಾಂಕ ಮತ್ತು ವೇಳೆಯಲ್ಲಿ ಮುಚ್ಚಿದ ಲಕೋಟೆ ಕಂ ಬಹಿರಂಗ ಹರಾಜು ಮೂಲಕ ಬಿಡ್ಡು ಮಾಡಲು ಅವಕಾಶವಿರುತ್ತದೆ. ಹರಾಜು ನಿಬಂಧನೆ, ನಿಯಮಾವಳಿ ಹಾಗೂ ಹೆಚ್ಚಿನ ವಿವರಗಳಿಗೆ ತೋಟಗಾರಿಕೆ ಉಪನಿರ್ದೇಶಕರ ಕಛೇರಿ, ರಾಜ್ಯವಲಯ, ಹಾಸನ ಕಛೇರಿಯನ್ನು ಕಛೇರಿ ಸಮಯದಲ್ಲಿ ಸಂಪರ್ಕಿಸಬಹುದು.

ಸಹಿ/-ತೋಟಗಾರಿಕೆ ಉಪನಿರ್ದೇಶಕರು
ರಾಜ್ಯವಲಯ, ಹಾಸನ,

ವಾಸಾಸಂಇ/ಹಿಸನಿ/ಹಾಸನ/446/ಕೆಎಸ್‌ಎಂಸಿಎ/2026-27

## ನಾಳೆ ಮಾಡಾಳು ಸ್ವರ್ಣ ಗೌರಮ್ಮ ದೇವಿ ಜಾತ್ರೆ

• ಪ್ರಜೋದಯ ವರದಿ



**ಮಾಡಾಳು:** ಅರಸೀಕೆರೆ ತಾಲ್ಲೂಕು ಮಾಡಾಳು ಗ್ರಾಮದಲ್ಲಿ ಆ.30ರ ಭಾನುವಾರ ಸ್ವರ್ಣ ಗೌರಮ್ಮ ದೇವಿ ಜಾತ್ರಾ ಮಹೋತ್ಸವ ನೆರವೇರಲಿದ್ದು ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗಿದೆ.

ಹಾರನಹಳ್ಳಿ ಸುಕ್ಷೇತ್ರ ಕೋಡಿಮಠದ ಉತ್ತರಾಧಿಕಾರಿ ಚೇತನ್ ಮರಿದೇವರ ಸಾನಿಧ್ಯದಲ್ಲಿ ಧಾರ್ಮಿಕ ಕೈಂಕರ್ಯ ನೆರ ವೇರಲಿವೆ. ಕಳೆದ 167 ವರ್ಷಗಳಿಂದ ಸಂಪ್ರದಾಯದಂತೆ ಆಚರಿಸಿ ಕೊಂಡು ಬರುತ್ತಿರುವ ಶ್ರೀ ಸ್ವರ್ಣಗೌರಮ್ಮ ದೇವಿ ಜಾತ್ರಾ ಮಹೋತ್ಸವ ಇದಾಗಿದೆ. ಅಂದು ಬೆಳಿಗ್ಗೆ 11 ಗಂಟೆಗೆ ಮೂಲ ಸನ್ನಿಧಿಯಲ್ಲಿ ಪೂಜೆ ಸಲ್ಲಿಸಿ ಗ್ರಾಮದ ಹೊರ ಭಾಗದಲ್ಲಿರುವ ಶ್ರೀ ಪಂಚ ಲಿಂಗೇಶ್ವರ ದೇವಾಲಯದ ಮುಂಭಾಗ ಇರುವ ತೋಟದಲ್ಲಿ ದೇವಿಯ ಮೂರ್ತಿ ತಯಾರಿಸಲು ಮೃತ್ತಿಕೆ (ಮಣ್ಣು) ತರಲಾಗುವುದು.

ಶ್ರೀಗಳ ಪಾದಪೂಜೆಯ ನಂತರ ಎರಡು ಕುಕ್ಕೆಗಳಲ್ಲಿ ಶ್ರದ್ಧಾ ಭಕ್ತಿಯಿಂದ ಮೃತ್ತಿಕೆಯನ್ನು ತಲೆ ಮೇಲೆ ಹೊತ್ತು ಮಂಗಲ ವಾದ್ಯದೊಂದಿಗೆ ಮೆರವಣಿಗೆ ಮೂಲಕ ವಾಪಾಸ್ ಮೂಲ ಸನ್ನಿಧಿಗೆ ತರಲಾಗುವುದು. ಮಹೋತ್ಸವ ಹಿನ್ನಲೆಯಲ್ಲಿ ದೇವಾಲಯ ವನ್ನು ತಳಿರು ತೋರಣಗಳಿಂದ ಸಿಂಗರಿಸಲಾ ಗಿದೆ. ಪ್ರತಿ ಮನೆಗಳಲ್ಲೂ ಸಂಭ್ರಮ ಮನೆ ಮಾಡಿದೆ.

## ಮಹನೀಯರ ತತ್ವಾದರ್ಶ ಸ್ವಸ್ಥ ಸಮಾಜಕ್ಕೆ ಅಡಿಪಾಯ

• ಪ್ರಜೋದಯ ವರದಿ

**ಸಕಲೇಶಪುರ:** ಇತಿಹಾಸವನ್ನು ಅರಿಯದವನು ಇತಿಹಾಸ ಸೃಷ್ಟಿಸಲಾರ. ಬ್ರಹ್ಮಶ್ರೀ ನಾರಾಯಣ ಗುರು ಹಾಗು ನುಲಿಯ ಚಂದಯ್ಯ ಅವರಂತಹ ಮಹನೀಯರು ಅಸಮಾನತೆ, ಶೋಷಣೆ ವಿರುದ್ಧ ಹೋರಾಡಿ ಮಾನವೀಯ ಮೌಲ್ಯಗಳನ್ನು ಬಿತ್ತಿದ್ದಾರೆಂದು ಶಾಸಕ ಸಿಮೆಂಟ್ ಮಂಜು ಅವರು ಹೇಳಿದರು.

ಪಟ್ಟಣದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಶುಕ್ರವಾರ ನಡೆದ ಬ್ರಹ್ಮಶ್ರೀ ನಾರಾಯಣ ಗುರು ಹಾಗು ನುಲಿಯ ಚಂದಯ್ಯ ಜಯಂತಿ ಉದ್ಘಾಟಿಸಿ ಮಾತನಾಡಿದ ಅವರು, ಮಹನೀಯರ ಜಯಂತಿಗಳನ್ನು ಕೇವಲ ಆಚರಣೆಗೆ ಸೀಮಿತಗೊಳಿಸಬಾರದು. ಅವರ ಜೀವನ, ಹೋರಾಟ, ಚಿಂತನೆ ಹಾಗು ಸಮಾಜಕ್ಕೆ ನೀಡಿದ ಕೊಡುಗೆಗಳನ್ನು ಯುವ ಪೀಳಿಗೆಗೆ ತಿಳಿಸಬೇಕು. ಹಣ ಮತ್ತು ಆಸ್ತಿ ಶಾಶ್ವತವಲ್ಲ. ಆದರೆ ಸಮಾಜಕ್ಕೆ ನೀಡಿದ ಉತ್ತಮ ಮೌಲ್ಯಗಳು, ವಿಚಾರಧಾರೆ ಹಾಗು ಆದರ್ಶ ಶಾಶ್ವತವಾಗಿ ಉಳಿಯುತ್ತವೆಂದರು.

ಹಿಂದಿನ ಕಾಲದಲ್ಲಿ ಸಮಾಜದಲ್ಲಿ ಅಸಮಾನತೆ ಯಾವ ಮಟ್ಟದಲ್ಲಿತ್ತು ಎಂಬುದನ್ನು ಇಂದಿನ ಪೀಳಿಗೆಗೆ ಊಹಿಸಿಕೊಳ್ಳುವುದು ಕಷ್ಟ. ಅಂತಹ ಕಾಲಘಟ್ಟದಲ್ಲಿ ನಾರಾಯಣ ಗುರು ಅವರು ಸಾಮಾಜಿಕ ಅಸಮಾನತೆಯ ವಿರುದ್ಧ ಹೋರಾಡಿ, ಮನುಷ್ಯರೆಲ್ಲರೂ ಒಂದೇ ಎಂಬ ಮಾನವೀಯ ಸಂದೇಶ ಸಾರಿದರು. ಅವರ ಚಿಂತನೆಗಳು ಸಾಮಾಜಿಕ ಸುಧಾರಣೆಗೆ ದೊಡ್ಡ ಶಕ್ತಿಯಾದವು ಎಂದು ಹೇಳಿದರು.




ಡಾ.ಬಿ.ಆರ್.ಅಂಬೇಡ್ಕರ್, ಬಸವಣ್ಣ ಹಾಗು ನಾರಾಯಣ ಗುರು ಅವರಂತಹ ಮಹನೀಯರು ಸಮಾಜದಲ್ಲಿ ಸುಧಾರಣೆಯ ಹಾದಿ ನಿರ್ಮಿಸದಿದ್ದರೆ ಇಂದು ನಾವು ಕಾಣುತ್ತಿರುವ ಸಮಾನತೆಯ ವಾತಾವರಣ ಅಸಾಧ್ಯವಾಗುತ್ತಿತ್ತು. ಅವರು ನಡೆಸಿದ ಹೋರಾಟ ಮತ್ತು ನೀಡಿದ ಕೊಡುಗೆಯಿಂದಲೇ ಸಮಾಜದ ಎಲ್ಲಾ ವರ್ಗದ ಜನರು ಸಮಾನ ಅವಕಾಶಗಳನ್ನು ಪಡೆಯಲು ಸಾಧ್ಯವಾಗಿದೆ. ನಾವೆಲ್ಲರೂ ಈ ಮಹನೀಯರ ಋಣದಲ್ಲಿದ್ದೇವೆಂದರು.

ಮಹಾತ್ಮ ಗಾಂಧೀಜಿ ಸೇರಿ ಅನೇಕ ಮಹನೀಯರು ನಾರಾಯಣ ಗುರು ಅವರ ವಿಚಾರ ಧಾರೆಗಳಿಂದ ಪ್ರೇರಣೆ ಪಡೆದಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರೂ ನಾರಾಯಣ ಗುರು ಅವರ ಜನ್ಮ ಸ್ಥಳಕ್ಕೆ ಭೇಟಿ ನೀಡಿ ಗೌರವ ಸಲ್ಲಿಸಿದ್ದಾರೆ. ಸಮಾಜಕ್ಕೆ ಅಮೂಲ್ಯ ಕೊಡುಗೆ ನೀಡಿದ ಮಹನೀಯರ ಹೆಸರು ಈ ಭೂಮಿ ಇರುವವರೆಗೂ ಅಜರಾಮರವಾಗಿರುತ್ತದೆಂದು ಹೇಳಿದರು.

ಕಾಯಕ ತತ್ವಕ್ಕೆ ನುಲಿಯ ಚಂದಯ್ಯ ಮಾದರಿ

ಬಸವಣ್ಣ ಅವರು ಸಾರಿದ ಕಾಯಕವೇ ಕೈಲಾಸ ಎಂಬ ತತ್ವವನ್ನು ತಮ್ಮ ಬದುಕಿನ ಮೂಲಕ ಸಾಕಾರಗೊಳಿಸಿದವರಲ್ಲಿ ನುಲಿಯ ಚಂದಯ್ಯ ಪ್ರಮುಖರು. ದುಡಿಮೆಗೆ ಗೌರವ ನೀಡಿ, ಕಷ್ಟಪಟ್ಟು ಸಂಪಾದಿಸಿದುದನ್ನು ದಾಸೋಹದ ಮೂಲಕ ಸಮಾಜದ ಒಳಿತಿಗೆ ಬಳಸಿದ ಅವರ ಜೀವನ ಎಲ್ಲರಿಗೂ ಮಾದರಿಯಾಗಿದೆ ಎಂದರು.

ಬ್ರಹ್ಮಶ್ರೀ ನಾರಾಯಣ ಗುರು ತಾಲ್ಲೂಕು ಸಂಘಟನೆಯ ಅಧ್ಯಕ್ಷ ಭಾಸ್ಕರ್, ನುಲಿಯ ಚಂದಯ್ಯ ಸಂಘಟನೆಯ ತಾಲ್ಲೂಕು ಅಧ್ಯಕ್ಷ ಮೋಹನ್, ಪ್ರಾಂಶುಪಾಲ ರಮೇಶ್ ಮತ್ತಿತರರಿದ್ದರು.

## ಹೈಕಮಾಂಡ್ ಕಪಿಮುಷ್ಟಿಯಲ್ಲಿ ರಾಜ್ಯ ಸರ್ಕಾರ

» ಮೊದಲನೇ ಪುಟದಿಂದ

ಈ ಕಾರಣದಿಂದ ಕರ್ನಾಟಕವನ್ನು ಬಲಿಕೊಡಲಾಗುತ್ತಿದೆಂಬ ಅನುಮಾನ ಮೂಡುತ್ತಿದೆಂದು ಆರೋಪಿಸಿದರು.

**ಬಿಡದಿಗೆ ಟೌನ್‌ಶಿಪ್ ವಿರೋಧ**

ಬಿಡದಿ ಪ್ರದೇಶದಲ್ಲಿ ಟೌನ್‌ಶಿಪ್ ನಿರ್ಮಾಣ ಮಾಡುವ ಯಾವುದೇ ಯೋಜನೆಗೆ ಸರ್ಕಾರ ಅವಕಾಶ ನೀಡ ಬಾರದು. ರೈತರ ಜಮೀನು ಕಿತ್ತುಕೊಂಡು ಟೌನ್‌ಶಿಪ್ ನಿರ್ಮಿಸುವುದರಿಂದ ರೈತರಿಗೆ ಅನ್ಯಾಯವಾಗಲಿದೆ. ಬಿಡದಿ ರೈತರ ಬೇಡಿಕೆ ನ್ಯಾಯಯುತವಾಗಿದೆ. ಆದರೆ ಸರ್ಕಾರವೇ ರೈತರನ್ನು ಇಬ್ಭಾಗ ಮಾಡುವ ಕೆಲಸ ಮಾಡುತ್ತಿದೆಂದು ಆರೋಪಿಸಿದರು.

ಯಾವುದೇ ಕಾರಣಕ್ಕೂ ಬಿಡದಿಯಲ್ಲಿ ಟೌನ್‌ಶಿಪ್ ನಿರ್ಮಾಣವಾಗಬಾರದು. ಉಪನಗರ ನಿರ್ಮಾಣದ ಹೆಸರಿನಲ್ಲಿ ಸಾವಿರಾರು ಕೋಟಿ ರೂ. ವ್ಯವಹಾರ ನಡೆಸಲು ದೊಡ್ಡ ಯೋಜನೆ ರೂಪಿಸಲಾಗಿದೆ. ಟೌನ್‌ಶಿಪ್ ನಿರ್ಮಾಣದ ಉದ್ದೇಶವೇ ಸಾವಿರಾರು ಕೋಟಿ ರೂಪಾಯಿ ಲೂಟಿ ಮಾಡುವುದಾಗಿದೆ ಎಂಬ ಅನುಮಾನ ಮೂಡುತ್ತಿದೆ. ರೈತರ ಜಮೀನು ಕಿತ್ತುಕೊಂಡು ಅವರ ನೋವನ್ನು ಯಾರಿಂದಲೂ ಸರಿಪಡಿಸಲು ಸಾಧ್ಯವಿಲ್ಲ ಎಂದು ಹೇಳಿದರು.

**ಎನ್‌ಕೌಂಟರ್ ಸಿಬಿಐ ತನಿಖೆಗೆ ಆಗ್ರಹ**

ಹನೂರು ಅರಣ್ಯ ಪ್ರದೇಶದಲ್ಲಿ ನಡೆದಿರುವ ಎನ್‌ಕೌಂಟರ್ ಅತ್ಯಂತ ಗಂಭೀರ ಘಟನೆ. ಮೂವರು ಅಮಾಯಕ ವ್ಯಕ್ತಿಗಳನ್ನು ಹತ್ತಿರದಿಂದ ಗುಂಡು ಹೊಡೆದು ಹತ್ಯೆ ಮಾಡಲಾಗಿದೆ ಎಂಬ ಆರೋಪವಿದೆ. ಹತ್ತಿರದಿಂದಲೇ ಗುಂಡು ಹಾರಿಸಿರುವುದು ಸಾಬೀತಾ ಗಿದೆ. ಇದು ಅತ್ಯಂತ ಗಂಭೀರ ವಿಚಾರವಾಗಿದ್ದು, ಪ್ರಕರಣದ ಸತ್ಯಾಸತ್ಯತೆ ಹೊರಬರಬೇಕಿದೆ. ಹೀಗಾಗಿ ಪ್ರಕರಣದ ತನಿಖೆಯನ್ನು ರಾಜ್ಯದ ತನಿಖಾ ಸಂಸ್ಥೆಗಳಿಂದನಡೆಸುವ ಬದಲು ಕೇಂದ್ರ ತನಿಖಾ ದಳಕ್ಕೆ ವಹಿಸಬೇಕೆಂದು ಒತ್ತಾಯಿಸಿದರು.

## ಹೆದ್ದಾರಿ ಕಾಮಗಾರಿ ಅವೈಜ್ಞಾನಿಕ: ಸ್ಥಳೀಯರ ಆಕ್ರೋಶ

» ಮೊದಲನೇ ಪುಟದಿಂದ

ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಶಾಸಕ ಹೆಚ್.ಪಿ.ಸ್ವರೂಪ್ ಹಾಗು ಡಿವೈಎಸ್ಪಿ ಗಂಗಾಧರಪ್ಪ, ಪ್ರತಿಭಟನಾಕಾರರೊಂದಿಗೆ ಮಾತುಕತೆ ನಡೆಸಿದರು. ಈ ವೇಳೆ ಪ್ರತಿಭಟನಾಕಾರರು, ನಮ್ಮ ಸಮಸ್ಯೆಯನ್ನು ಜಿಲ್ಲಾಧಿಕಾರಿ ಹಾಗು ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ ಹಲವು ಬಾರಿ ಮನವಿ ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ದೂರಿದರು.

ಈ ವೇಳೆ ಮಾತನಾಡಿದ ಅಧಿಕಾರಿಗಳು, ಕಾಮಗಾರಿ ಪೂರ್ಣಗೊಳಿಸುವ ಉದ್ದೇಶದಿಂದ ಸಂಬಂಧಿಸಿದ ರಸ್ತೆಯನ್ನು ತಾತ್ಕಾಲಿಕವಾಗಿ ಬಂದ್ ಮಾಡಲು ಈಗಾಗಲೇ ಮನವಿ ಸಲ್ಲಿಸ ಲಾಗಿದೆ ಎಂದರು. ಕಳೆದ ವರ್ಷ ಕೇವಲ 1 ತಿಂಗಳು ಮಾತ್ರ ಬಂದ್ ಮಾಡಲು ಅವಕಾಶ ದೊರೆತಿತ್ತು. ಹಾಸನಾಂಬ ಜಾತ್ರೆ ಹಿನ್ನಲೆ ಹೆಚ್ಚು ದಿನ ಅವಕಾಶ ಸಿಗಲಿಲ್ಲ, ಜಾತ್ರೆ ಮುಗಿದ ಬಳಿಕವೂ ರಸ್ತೆ ಬಂದ್‌ಗೆ ಅನುಮತಿ ದೊರೆತಿಲ್ಲ ಎಂದು ವಿವರಿಸಿದರು.

ರಸ್ತೆ ಬಂದ್‌ಗೆ ಅನುಮತಿ ದೊರೆತ ತಕ್ಷಣ ಬಾಕಿ ಕಾಮಗಾರಿ ಪೂರ್ಣಗೊಳಿಸಲಾಗುವುದೆಂದು ಅಧಿಕಾರಿಗಳು ಭರವಸೆ ನೀಡಿದರು. ಆರಂಭದಲ್ಲಿ ರೂಪಿಸಿದ್ದ ಯೋಜನೆಗಳಲ್ಲಿ ಪದೇ ಪದೇ ಬದಲಾವಣೆ ಮಾಡಿರುವುದೇ ಸಮಸ್ಯೆಗೆ ಕಾರಣ ಎಂದು ಮತ್ತೆ ಆರೋಪಿಸಿದ ಸ್ಥಳೀಯರು, ವಿಳಂಬ ಮಾಡದೆ ಸರ್ವಿಸ್ ರಸ್ತೆ ಅಥವಾ ಪರ್ಯಾಯ ಸಂಚಾರ ವ್ಯವಸ್ಥೆ ಕಲ್ಪಿಸಬೇಕೆಂದು ಒತ್ತಾಯಿಸಿದರು.

## ನಾಪತ್ತೆ ವ್ಯಕ್ತಿ ಮೃತದೇಹಕ್ಕೆ ಶೋಧ: ಎರಡು ಶವ ಪತ್ತೆ

» ಮೊದಲನೇ ಪುಟದಿಂದ

ಆರಂಭಿಸಿದ್ದರು. ಶೋಧ ಕಾರ್ಯ ನಡೆಸುತ್ತಿದ್ದ ವೇಳೆ ಪೊಲೀಸರಿಗೆ ನಂದಕುಮಾರ್ ಅವರ ಮೃತದೇಹ ಪತ್ತೆಯಾಗಿದೆ. ಅವರ ಮೃತದೇಹದ ಜೊತೆಗೆ ಮತ್ತೊಬ್ಬ ವ್ಯಕ್ತಿಯ ಮೃತದೇಹವೂ ಪತ್ತೆಯಾಗಿದ್ದು, ಪೊಲೀಸರನ್ನೇ ಬೆಚ್ಚಿಬೀಳಿಸಿದೆ. ಮತ್ತೊಂದು ಮೃತದೇಹ ಪತ್ತೆಯಾಗಿರುವ ವ್ಯಕ್ತಿಯ ಗುರುತು ಇನ್ನೂ ಪತ್ತೆಯಾಗಿಲ್ಲ. ಎರಡು ಮೃತದೇಹಗಳು ಒಂದೇ ಸ್ಥಳದಲ್ಲಿ ಪತ್ತೆಯಾಗಿರುವ ಹಿನ್ನಲೆಯಲ್ಲಿ ಪ್ರಕರಣ ಹಲವು ಅನುಮಾನಗಳಿಗೆ ಕಾರಣವಾಗಿದೆ. ಘಟನೆ ಕುರಿತು ಚನ್ನರಾಯಪಟ್ಟಣ ಗ್ರಾಮಾಂತರ ಪೊಲೀಸರು ತನಿಖೆ ಕೈಗೊಂಡಿದ್ದು, ಮೃತ ವ್ಯಕ್ತಿಯ ಗುರುತು ಪತ್ತೆ ಹಾಗು ಸಾವಿನ ನಿಖರ ಕಾರಣ ತಿಳಿಯಲು ಚನ್ನರಾಯಪಟ್ಟಣ ಗ್ರಾಮಾಂತರ ಠಾಣೆ ಪೊಲೀಸರು ಮುಂದಾಗಿದ್ದಾರೆ.

## ಸಮನ್ವಯದಿಂದ ಕಾಮಗಾರಿ ನಡೆಸಿ: ಸ್ವರೂಪ್



• ಪ್ರಜೋದಯ ವರದಿ

**ಹಾಸನ:** ನಗರದ ನಂದಿನಿ ಬಡಾವಣೆ, ಶರಾವತಿ ಬಡಾವಣೆ, ಎಸ್‌ಬಿಎಂ ಕಾಲೋನಿ ಸೇರಿ ವಿವಿಧ ಬಡಾವಣೆಗಳಲ್ಲಿ ಪ್ರಗತಿಯಲ್ಲಿರುವರಸ್ತೆ, ಚರಂಡಿ ಹಾಗು ಇತರೆ ಅಭಿವೃದ್ಧಿ ಕಾಮಗಾರಿಗಳನ್ನು ಶಾಸಕ ಹೆಚ್.ಪಿ. ಸ್ವರೂಪ್ ಅವರು ಶುಕ್ರವಾರ ಪರಿಶೀಲಿಸಿದರು.

ಕೆಲವು ಕಾಮಗಾರಿಗಳಿಗೆ ಜಾಗದ ವಿಚಾರವಾಗಿ ಸ್ಥಳೀಯರು ಅಡ್ಡಿಪಡಿಸುತ್ತಿದ್ದಾರೆಂಬ ಮಾಹಿತಿ ಹಿನ್ನಲೆ ನಗರಾಭಿವೃದ್ಧಿ ಅಧಿಕಾರಿಗಳೊಂದಿಗೆ ಸ್ಥಳಕ್ಕೆ ಭೇಟಿ ನೀಡಿದ ಶಾಸಕರು, ಜಾಗದ ಮಾಲೀಕರೊಂದಿಗೆ ಮಾತುಕತೆ ನಡೆಸಿ ಅವರ ಮನವೊಲಿಸುವಂತೆ ಸೂಚಿಸಿದರು. ಜಾಗದ ಮಾಲೀಕರ ಒಪ್ಪಿಗೆ ಪಡೆದು ಯಾವುದೇ ಸಮಸ್ಯೆಯಾಗದಂತೆ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಿ ಸಾರ್ವಜನಿಕರ ಬಳಕೆಗೆ ಮುಕ್ತಗೊಳಿಸ ಬೇಕೆಂದು ಗುತ್ತಿಗೆದಾರರು ಹಾಗೂ ಅಧಿಕಾರಿಗಳಿಗೆ ಸೂಚಿಸಿದರು.

ಅಭಿವೃದ್ಧಿ ಕಾಮಗಾರಿಗಳ ಅನುಷ್ಠಾನದಲ್ಲಿ ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ಅಧಿಕಾರಿಗಳು ಹಾಗೂ ಗುತ್ತಿಗೆದಾರರು ಸಮನ್ವಯದಿಂದ ಕಾರ್ಯ ನಿರ್ವಹಿಸಬೇಕು. ಕಾಮಗಾರಿಗಳ ಗುಣಮಟ್ಟದಲ್ಲಿ ಯಾವುದೇ ರಾಜಿಯಾಗಬಾರದೆಂದು ನಿರ್ದೇಶನ ನೀಡಿದರು.

ಈ ವೇಳೆ ವಿವಿಧ ಕಡೆಗಳಿಗೆ ಭೇಟಿ ನೀಡಿ ಸಾರ್ವಜನಿಕರ ಅನುಕೂಲಕ್ಕಾಗಿ ಕೈಗೊಳ್ಳಲಾ ಗುತ್ತಿರುವ ಕಾಮಗಾರಿಗಳು ಗುಣಮಟ್ಟದಿಂದಕೂಡಿರ ಬೇಕೆಂಬ ಉದ್ದೇಶದಿಂದ ಕಾಮಗಾರಿ ಪ್ರಗತಿ ಹಾಗು ಗುಣಮಟ್ಟದ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು.

## ಕ್ರೀಡಾಕೂಟ ಪ್ರತಿಭೆ-ಸಾಮರ್ಥ್ಯ ಹೊರತರುವ ವೇದಿಕೆ

• ಪ್ರಜೋದಯ ವರದಿ

**ಹಾಸನ:** ಕ್ರೀಡಾಕೂಟಗಳು ವಿದ್ಯಾರ್ಥಿಗಳಲ್ಲಿರುವ ಪ್ರತಿಭೆ ಹಾಗು ಸಾಮರ್ಥ್ಯವನ್ನು ಹೊರ ತರುವ ಉತ್ತಮ ವೇದಿಕೆಗಳಾಗಿವೆ ಎಂದು ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೆ.ಪಿ.ಗಂಗಾಧರ್ ಅವರು ತಿಳಿಸಿದರು.

ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆ, ಹರನಹಳ್ಳಿ ರಾಮಸ್ವಾಮಿ ಪದವಿಪೂರ್ವ ಕಾಲೇಜು (ಮಲೆನಾಡು ತಾಂತ್ರಿಕ ಶಿಕ್ಷಣ ಸಮಿತಿ) ಸಂಯುಕ್ತ ಆಶ್ರಯದಲ್ಲಿ ನಡೆದ ತಾಲ್ಲೂಕು ಮಟ್ಟದ ಎ ಗುಂಪಿನ ಪದವಿಪೂರ್ವ ಕಾಲೇಜುಗಳ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಕ್ರೀಡೆಯಲ್ಲಿ ಯಾವುದೇ ರೀತಿಯ ಗೊಂದಲಕ್ಕೆ ಅವಕಾಶ ನೀಡದೆ ತೀರ್ಪುಗಾರರ ನಿರ್ಣಯವನ್ನು ಗೌರವಿಸಬೇಕು. ಕ್ರೀಡಾಪಟುಗಳು ಗೆಲುವಿನ ಜೊತೆಗೆ ಶಿಸ್ತು ಹಾಗು ಕ್ರೀಡಾ ಸ್ಪೂರ್ತಿಗೆ ಆದ್ಯತೆ ನೀಡಬೇಕು ಎಂದರು.

ಸದೃಢ ದೇಹ ಹೊಂದಿರುವವರು ಸದೃಢ ಮನಸ್ಸನ್ನೂ ಹೊಂದಿರಬೇಕು. ವಿದ್ಯಾರ್ಥಿಗಳು ತಮ್ಮ ಸಾಮರ್ಥ್ಯದ ಮೇಲೆ ವಿಶ್ವಾಸವಿಟ್ಟು ಗೆಲುವು ಸಾಧಿಸು ವತ್ತ ಗಮನ ಹರಿಸಬೇಕು. ಸಣ್ಣಪುಟ್ಟ ತಪ್ಪುಗಳಿಗೂ ಅವಕಾಶ ನೀಡದೆ ಕ್ರೀಡಾ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಕ್ರೀಡೆಯಲ್ಲಿ ಶಿಸ್ತು ಹಾಗು ಕ್ರೀಡಾ ಮನೋಭಾವ ಅತ್ಯಂತ ಮುಖ್ಯ ಎಂದು ಅಭಿಪ್ರಾಯಪಟ್ಟರು.

ಎಂಸಿಇ ಶಿಕ್ಷಣ ಸಂಸ್ಥೆಯ ಅಧ್ಯಕ್ಷ, ಮಾಜಿ ಶಾಸಕ ಬಿ.ಆರ್.ಗುರುದೇವ್ ಅವರು ಮಾತನಾಡಿ, ಕ್ರೀಡೆಯಲ್ಲಿ ಭಾಗವಹಿಸುವ ವಿದ್ಯಾರ್ಥಿಗಳು ಶಿಸ್ತು ಕಾಪಾಡಿಕೊಳ್ಳಬೇಕು. ಕೇಂದ್ರ ಸರ್ಕಾರ ಕ್ರೀಡೆಗೆ ಹೆಚ್ಚಿನ ಪ್ರೋತ್ಸಾಹ ನೀಡುತ್ತಿದ್ದು, ಕ್ರೀಡಾ ಕ್ಷೇತ್ರದಲ್ಲಿ ದೇಶದ ಸಾಧನೆಗಳು ಅಂತಾರಾಷ್ಟ್ರೀಯ ಮಟ್ಟದಲ್ಲಿ ಭಾರತದ ಕೀರ್ತಿಯನ್ನು ಹೆಚ್ಚಿಸುತ್ತಿವೆ ಎಂದರು.



ಜಿಲ್ಲೆಯ ಕ್ರೀಡಾಪಟುಗಳು ರಾಜ್ಯ ಹಾಗು ರಾಷ್ಟ್ರಮಟ್ಟದಲ್ಲಿಸಾಧನೆ ಮಾಡುವಂತಾಗಬೇಕು. ಆತ್ಮವಿಶ್ವಾಸದೊಂದಿಗೆ ಗುರಿ ಸಾಧನೆಗಾಗಿ ನಿರಂತರ ಪರಿಶ್ರಮ ವಹಿಸಬೇಕು. ತಮ್ಮ ಕಾಲೇಜು ಹಾಗೂ ಜಿಲ್ಲೆಯ ಕೀರ್ತಿ ಹೆಚ್ಚಿಸುವಂತೆ ಕ್ರೀಡಾಪಟುಗಳಿಗೆ ಶುಭ ಹಾರೈಸಿದರು.

ಮಲೆನಾಡು ತಾಂತ್ರಿಕ ಶಿಕ್ಷಣ ಸಂಸ್ಥೆಯ ಉಪಾಧ್ಯಕ್ಷ ಕಾರ್ತಿಕ್ ಮಾತನಾಡಿ, ಕ್ರೀಡೆಯಿಂದ ದೈಹಿಕ ಸದೃಢತೆಯ ಜೊತೆಗೆ ಮನಸ್ಸಿನ ಏಕಾಗ್ರತೆಯೂ ವೃದ್ಧಿಸುತ್ತದೆ. ಕ್ರೀಡಾಪಟುಗಳು ಸೋಲು-ಗೆಲುವನ್ನು ಸಮಾನವಾಗಿ ಸ್ವೀಕರಿಸಿ, ಕ್ರೀಡಾ ಸ್ಪೂರ್ತಿಯಿಂದ ಮುನ್ನಡೆಯಬೇಕೆಂದು ಕರೆ ನೀಡಿದರು.

ಎಂಸಿಇ ಶಿಕ್ಷಣ ಸಂಸ್ಥೆಯ ನಿರ್ದೇಶಕ ಜಿ.ಎಲ್.ಮುದ್ದೇಗೌಡ, ಕೆ.ಎನ್.ಗುರಪ್ಪ, ಶಿವಣ್ಣ, ಎಂ.ಕೆ.ಪಾರ್ಥ, ಗಣೇಶ್, ವಿಜಯಕುಮಾರ್, ಕೃಷ್ಣ ಮೂರ್ತಿ, ಪ್ರಶಾಂತ್ ಸೇರಿ ಹಲವರು ಉಪಸ್ಥಿತರಿದ್ದರು.

## ವಿರೋಧದ ಮಧ್ಯೆ ನಗರದಲ್ಲಿ ಒತ್ತುವರಿ ತೆರವು

• ಪ್ರಜೋದಯ ವರದಿ

**ಹಾಸನ:** ನಗರದ ಜಿಲ್ಲಾಧಿಕಾರಿ ಕಚೇರಿ ಸಮೀಪದ ರಸ್ತೆಯಲ್ಲಿ ಮಹಾನಗರ ಪಾಲಿಕೆ ಸಿಬ್ಬಂದಿ ಶುಕ್ರವಾರ ಒತ್ತುವರಿ ತೆರವು ಕಾರ್ಯಾಚರಣೆ ನಡೆಸಿದರು.

ಸುಪ್ರೀಂ ಕೋರ್ಟ್ ನಿರ್ದೇಶನ ಹಿನ್ನಲೆಯಲ್ಲಿ ಈ ಹಿಂದೆಯೇ ತೆರವು ಕಾರ್ಯಾಚರಣೆ ನಡೆಸಲಾಗಿತ್ತಾದರೂ ಓಮಿನಿಯಲ್ಲಿ ಬಟ್ಟೆ ಮಾರಾಟ ಮಾಡುತ್ತಿದ್ದ ಅಂಗಡಿ ತೆರೆಯಲಾಗಿತ್ತು. ಅದರಿಂದ ಇತರ ಬೀದಿಬದಿ ವ್ಯಾಪಾರಿಗಳು ಪ್ರಶ್ನಿಸಿದ ಹಿನ್ನಲೆಯಲ್ಲಿ ಇಪ್ಪತ್ತಕ್ಕೂ ಹೆಚ್ಚು ಪೌರ ಕಾರ್ಮಿಕರು ಸ್ಥಳಕ್ಕೆ ಆಗಮಿಸಿ ಓಮಿನಿಯನ್ನೇ ತಳ್ಳಿಕೊಂಡು ಹೋದರು. ಈ ವೇಳೆ ಬಟ್ಟೆ ವ್ಯಾಪಾರಿ ಮಹಿಳೆ ಹಾಗು ಪಾಲಿಕೆ ನೌಕರರ ನಡುವೆ ವಾಗ್ವಾದ ನಡೆಯಿತು.

**ಎಲ್ಲೆಂದರಲ್ಲಿ ಆಟೋ ನಿಲ್ದಾಣ ಏಕೆ**

ಒತ್ತುವರಿ ತೆರವು ಕುರಿತು ಸ್ಥಳೀಯರು ಮಾತನಾಡಿ, ನಗರದಲ್ಲಿ ರಸ್ತೆ ಒತ್ತುವರಿಯಿಂದ ಸಾರ್ವಜನಿಕರಿಗೆ ತೊಂದರೆ ಆಗುತ್ತಿದೆ ಎಂದು ಗೊತ್ತಿದ್ದರೂ ಶಾಸಕ ಹೆಚ್.ಪಿ.ಸ್ವರೂಪ್ ಅವರು ಆಟೋ ನಿಲ್ದಾಣ, ಫುಡ್ ಕೋರ್ಟ್‌ಗೆ ಅವಕಾಶ ಕಲ್ಪಿಸುತ್ತಿದ್ದಾರೆ. ಅವರೇ ಮುಂದೆ ನಿಂತು ಉದ್ಘಾಟನೆ ನೆರವೇರಿಸುತ್ತಿದ್ದಾರೆ. ಎಲ್ಲೆಂದರಲ್ಲಿ ಆಟೋ ನಿಲ್ದಾಣ ಮಾಡುವುದಾದರೆ ಪೆಟ್ಟಿಗೆ ಅಂಗಡಿಯವರು ಎಲ್ಲಿಗೆ ಹೋಗಬೇಕೆಂದು ಪ್ರಶ್ನಿಸಿದರು.

ಒತ್ತುವರಿ ತೆರವು ನಿಮ್ಮ ಉದ್ದೇಶವಾಗಿದ್ದರೆ ಪಾರದರ್ಶಕತೆ ಕಾಪಾಡಬೇಕು. ತೆರವು ಮಾಡಿದ ಬಹುತೇಕ ರಸ್ತೆಗಳೆಲ್ಲಾ ಈಗ ಕಾರು ಪಾರ್ಕಿಂಗ್ ತಾಣಗಳಾಗಿ ಮಾರ್ಪಟ್ಟಿವೆ. ಅದರ ಬದಲು ಪೆಟ್ಟಿಗೆ ಅಂಗಡಿ ನಡೆಸಲು ಬಿಟ್ಟರೆ ಬಡವರಿಗೆ ಜೀವನಕ್ಕೆ ದಾರಿಯಾಗುತ್ತದೆ. ಯಾವುದೇ ಒಂದು ನಿಯಮ ಜಾರಿಗೆ ಬರಬೇಕೆಂದರೆ ಕಟ್ಟುನಿಟ್ಟಾಗಿ ಪಾಲಿಸಬೇಕು. ಆಸ್ಪತ್ರೆ ರಸ್ತೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಕಾರುಗಳು ನಿಲ್ಲುತ್ತಿವೆ. ಮೊದಲು ಅದಕ್ಕೆ ಕಡಿವಾಣ ಹಾಕಬೇಕು. ಆಸ್ಪತ್ರೆ ಆಡಳಿತ ಮಂಡಳಿಯೂ ಈ ಬಗ್ಗೆ ಕ್ರಮ ವಹಿಸುತ್ತಿಲ್ಲ. ಬಡವರ ಮೇಲೆ ದ್ವೇಷ ಸಾಧಿಸುವ ಪ್ರಕ್ರಿಯೆ ಮುಂದುವರಿದರೆ ಪ್ರತಿಭಟನೆ ನಡೆಸಲಾಗುವುದೆಂದು ಎಚ್ಚರಿಕೆ ನೀಡಿದರು.



## ಶೋಷಿತ ಸಮುದಾಯಕ್ಕೆ ನೆರವಾದ ನಾರಾಯಣ ಗುರು

• ಪ್ರಜೋದಯ ವರದಿ



**ಚನ್ನರಾಯಪಟ್ಟಣ:** ಶಿಕ್ಷಣದೊಂದಿಗೆ ಸಾಮಾಜಿಕ ಕ್ರಾಂತಿಯ ಮೂಲಕ ಶೋಷಿತ ಮತ್ತು ಹಿಂದುಳಿದ ಸಮಾಜಕ್ಕೆ ಸಮಾನತೆ ಒದಗಿಸಿಕೊಟ್ಟವರು ಬ್ರಹ್ಮಶ್ರೀ ನಾರಾಯಣ ಗುರು ಎಂದು ಶಾಸಕ ಸಿ.ಎನ್.ಬಾಲಕೃಷ್ಣ ಅವರು ತಿಳಿಸಿದರು.

ಪಟ್ಟಣದ ಮಿನಿ ವಿಧಾನಸೌಧ ಆವರಣದಲ್ಲಿ ಶುಕ್ರವಾರ ತಾಲ್ಲೂಕು ಆಡಳಿತ ಹಾಗು ಆರ್ಯ ಈಡಿಗ ಸಮಾಜದಿಂದ ಹಮ್ಮಿಕೊಂಡಿದ್ದ ಬ್ರಹ್ಮಶ್ರೀ ನಾರಾಯಣ ಗುರು ಅವರ 172ನೇ ಜಯಂತೋತ್ಸವ ಹಾಗು ತಾಲ್ಲೂಕು ಕುಳುವ ಜನಾಂಗದ ಕ್ಷೇಮಾಭಿವೃದ್ಧಿ ಸಂಘದಿಂದ ಆಯೋಜಿಸಿದ್ದ ಶಿವಶರಣ ಮತ್ತು ಕಾಯಕ ಯೋಗಿ ನುಲಿಯ ಚಂದಯ್ಯನವರ 919ನೇ ಜಯಂತಿಗೆ ಚಾಲನೆ ನೀಡಿ ಮಾತನಾಡಿದರು.

ದೇಶದಲ್ಲಿ ಅಸಮಾನತೆ, ಜಾತೀಯತೆ ವಿಜೃಂಭಿಸುತ್ತಿದ್ದ ಕಾಲದಲ್ಲಿಸಮಾನತೆಯ ಸಿದ್ಧಾಂತ ವನ್ನು ಜಗತ್ತಿಗೆ ಸಾರಿದವರು ನಾರಾಯಣ ಗುರು. ಅವರ ತತ್ವ ಸಿದ್ಧಾಂತವನ್ನು ಜಗತ್ತು ಒಪ್ಪಿ ಕೊಂಡಿತ್ತು. ಒಂದೇ ಜಾತಿ, ಒಂದೇ ಮತ, ಒಂದೇ ದೇವರು ಎಂಬ ಕಲ್ಪನೆಯೊಂದಿಗೆ ಸಮಾಜದಲ್ಲಿ ನೊಂದವರ ಧ್ವನಿಯಾಗಿ, ಓರ್ವ ಯೋಗಿಯಾಗಿ ಅನೇಕ ಸುಧಾರಣೆ ತಂದಿದ್ದಾರೆ. ಶೋಷಿತರು ಮತ್ತು ಹಿಂದುಳಿದವರ ಶ್ರೇಯೋಭಿವೃದ್ಧಿಗೆ ನಾರಾಯಣ ಗುರುಗಳ ಹೋರಾಟ ಅವಿರಸ್ಮರಣೀಯವಾದದ್ದು ಎಂದರು.

ಇತ್ತೀಚಿನ ದಿನಗಳಲ್ಲಿ ಜಾತಿ ಜಾತಿಗಳ ನಡುವೆ ಸಾಮರಸ್ಯ ಕದಡುತ್ತಿರುವ ಹಿನ್ನಲೆಯಲ್ಲಿ ಸಾಮಾಜಿಕ ನ್ಯಾಯದ ಸಮಸಮಾಜ ನಿರ್ಮಾಣಕ್ಕೆ ಮುನ್ನುಡಿ ಬರೆದ ಶ್ರೀ ನಾರಾಯಣ ಗುರುಗಳು ಹಾಕಿಕೊಟ್ಟ ಮಾರ್ಗದಲ್ಲಿ ನಾವೆಲ್ಲರೂ ಸಾಗೋಣ. ಅವರು ಕಂಡ ಕನಸುಗಳನ್ನು ನಾವೆಲ್ಲರೂ ಕಾರ್ಯರೂಪಕ್ಕೆ ತರಲು ಶ್ರಮಿಸೋಣ ಎಂದರು.

ಬಸವಣ್ಣನವರ ಸಮಕಾಲೀನ ಶಿವಶರಣ ಮತ್ತು ಕಾಯಕಯೋಗಿ ನುಲಿಯ ಚಂದಯ್ಯ ಅವರು ಕಾಯಕದ ಮೂಲಕವೇ ಉನ್ನತಿ ಕಂಡವರು. ಹಗ್ಗ ನೇಯುವ ಕಾಯಕದಿಂದ ಬಂದ ಹಣದಿಂದ ದಾಸೋಹ ನಡೆಸಿದ ಶಿವಶರಣರು. ಬಸವ ಕಲ್ಯಾಣಕ್ಕೆ ಆಗಮಿಸಿದ ಇವರು ಕಾಯಕ ತತ್ವವನ್ನು ಜನಮಾನಸದಲ್ಲಿ ಬಿತ್ತುವುದರ ಮೂಲಕ ದುಡಿಯುವ ವರ್ಗಕ್ಕೆ ಅನುವು ಮಾಡಿಕೊಟ್ಟವರು. ಕಾಯಕಕ್ಕೆ ಒತ್ತು ನೀಡುವ ಮೂಲಕ ಕೊರಚ, ಕೊರವ ಸಮುದಾಯದ ಸಾಂಸ್ಕೃತಿಕ ಪ್ರತಿನಿಧಿಯಾಗಿ ಕಾಯ ಕದ ಮಹತ್ವವನ್ನು ಸಾರಿದ ನುಲಿಯ ಚಂದಯ್ಯನವರು ಕಾಯಕದಲ್ಲಿಯೇ ದೇವರನ್ನು ಕಂಡ ಮಹಾ ಶರಣರೆಂದರು.

**ಕಾನೂನು ತೊಡಕಿನಿಂದ ರದ್ದು**

ತಾಲ್ಲೂಕಿನಲ್ಲಿರುವ ವಿವಿಧ ಸಮಾಜಗಳ ಕಾರ್ಯ ಚಟುವಟಿಕೆಗಳಿಗೆ ಅನುಕೂಲವಾಗುವಂತೆ ವಿವಿಧ ಇಲಾಖೆಗಳ ಅಧೀನದಲ್ಲಿ ನಿವೇಶವನ್ನು ಹಸ್ತಾಂತರ ಗೊಳಿಸಲಾಗಿತ್ತಾದರೂ ಕಾನೂನು ತೊಡಕಿನಿಂದ ನಿವೇಶನ ಹಂಚಿಕೆ ರದ್ದಾಗಿದೆ. ಎಲ್ಲಾ ಸಮಾಜಗಳ ಕಾರ್ಯ ಚಟುವಟಿಕೆಗಳಿಗೆ ಅನುಕೂಲವಾಗುವಂತೆ ನಿವೇಶನ ನೀಡಲು ಕ್ರಮ ಕೈಗೊಳ್ಳಲಾಗುವುದೆಂದು ಭರವಸೆ ನೀಡಿದರು.

ತಾಲ್ಲೂಕು ಆರ್ಯ ಈಡಿಗ ಸಂಘದ ಅಧ್ಯಕ್ಷ ಹೆಚ್.ಟಿ.ವೆಂಕಟೇಶ್, ಮಾಜಿ ಅಧ್ಯಕ್ಷ ಸಿ.ಜಿ.ಮಂಜಪ್ಪ, ಉಪಾಧ್ಯಕ್ಷ ಸಿ.ಜಿ.ಕುಮಾರ್, ಕಾರ್ಯದರ್ಶಿ ಸಿ.ಎಸ್.ಕಾರ್ತಿಕ್, ನಿರ್ದೇಶಕ ಸಿ.ಜಿ.ಜಗದೀಶ್, ಶ್ರೀ ರೇಣುಕಾ ಯಲ್ಲಮ್ಮ ದೇವಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಸಿ.ಎಸ್.ಹರ್ಷ, ಮುಖಂಡರಾದ ಎಸ್.ಪಿ.ಕೃಷ್ಣಪ್ಪ, ಸಿ.ಎನ್.ದೀಪು, ಜಿ.ಆರ್.ಮಧುಸೂದನ್, ಹೆಚ್.ಟಿ.ಸುರೇಶ್, ದತ್ತ ಗುರು, ಕುಳುವ ಜನಾಂಗದ ಕ್ಷೇಮಾಭಿವೃದ್ಧಿ ಸಂಘದ ರವಿಕುಮಾರ್, ಆನಂದ್, ಪ್ರಕಾಶ್, ಶಿರಸ್ತೇದಾರ್ ಪವನ್ ಮತ್ತಿತರರಿದ್ದರು.

## ಅಧಿಕಾರಿಗಳನ್ನು ವೈಯಕ್ತಿಕವಾಗಿ ಟೀಕಿಸುವ ಪ್ರವೃತ್ತಿ ಬಿಡಲಿ

• ಪ್ರಜೋದಯ ವರದಿ

**ಹಾಸನ:** ಮಾಜಿ ಸಚಿವ ಹೆಚ್.ಡಿ.ರೇವಣ್ಣ ಅವರು ಅಧಿಕಾರಿಗಳನ್ನು ವೈಯಕ್ತಿಕ ವಾಗಿ ಟೀಕಿಸುವುದು ಹಾಗು ಭಯದ ವಾತಾವರಣ ಸೃಷ್ಟಿಸುವ ಪ್ರವೃತ್ತಿಯನ್ನು ಬಿಡಬೇಕೆಂದು ಕೆಪಿಸಿಸಿ ಸದಸ್ಯ ಸಲೀಂ ಕೊಲ್ಲಹಳ್ಳಿ ಅವರು ಹೇಳಿದರು.




ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾ ಡಿದ ಅವರು, ಅಧಿಕಾರಿಗಳು ಸಂವಿಧಾನ ಬದ್ಧವಾಗಿ, ಕಾನೂನು ಮತ್ತು ನಿಯಮಗಳ ಚೌಕಟ್ಟಿನಲ್ಲಿ ಕರ್ತವ್ಯ ನಿರ್ವಹಿಸಬೇಕೇ ಹೊರತು, ರಾಜಕೀಯ ವ್ಯಕ್ತಿಗಳ ಒತ್ತಡಕ್ಕೆ ಮಣಿದು ಕೆಲಸ ಮಾಡುವ ಪರಿಸ್ಥಿತಿ ಸೃಷ್ಟಿಯಾಗಬಾರದು. ತಮ್ಮ ಮಾತು ಕೇಳದ ಅಧಿಕಾರಿಗಳ ವಿರುದ್ಧ ಇಲ್ಲ ಸಲ್ಲದ ಆರೋಪ ಮಾಡುವುದು, ಅಧಿಕಾರಿಗಳನ್ನು ಸಾರ್ವಜನಿ ಕವಾಗಿ ಕೀಳು ಮಟ್ಟದಲ್ಲಿ ಮಾತನಾಡುವುದು ಅಥವಾ ಅವರ ಆತ್ಮಸ್ಥೈರ್ಯ ಕುಗ್ಗಿಸುವ ಪ್ರಯತ್ನ ಮಾಡುವುದು ಸರಿಯಲ್ಲ ಎಂದು ಹೇಳಿದರು.

ಹಿಂದೆಯೂ ರೇವಣ್ಣ ಅವರು ಹೀಗೆ ಮಾತನಾಡಿರುವ ನಿದರ್ಶನ ಇವೆ. ರೇವಣ್ಣ ಅವರು ತಮ್ಮ ರಾಜಕೀಯ ಅನುಭವವನ್ನು ಈ ರೀತಿ ಬದಲು, ಜನರ ಸಮಸ್ಯೆ ಪರಿಹರಿಸಲು ಬಳಸಬೇಕು. ಅಧಿಕಾರಿಗಳ ಕಾರ್ಯವೈಖರಿಯಲ್ಲಿ ತಪ್ಪಿದ್ದರೆ ಕಾನೂನು ಬದ್ಧವಾಗಿ ಪ್ರಶ್ನಿಸುವ ಹಕ್ಕು ಎಲ್ಲರಿಗೂ ಇದೆ. ವೈಯಕ್ತಿಕ ನಿಂದನೆ, ಬೆದರಿಕೆ ಅಥವಾ ರಾಜಕೀಯ ಒತ್ತಡ ಹೇರಿ ಆಡಳಿತ ವ್ಯವಸ್ಥೆ ನಿಯಂತ್ರಿಸುವ ಪ್ರಯತ್ನ ಸಹಿಸಲು ಸಾಧ್ಯವಿಲ್ಲ ಎಂದು ತಿಳಿಸಿದರು.

ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರ ವಿರುದ್ಧ ಗ್ರಾಮ ಪಂಚಾಯಿತಿ ಮೀಸಲಾತಿ ವಿಚಾರದಲ್ಲಿ ಮಾಡುತ್ತಿರುವ ಆರೋಪ ಕುರಿತು ಸ್ಪಷ್ಟತೆ ಅಗತ್ಯವಿದೆ. ಮೀಸಲಾತಿ ವಿಚಾರದಲ್ಲಿ ಅಧಿಕಾರಿಗಳ ವಿರುದ್ಧ ವೈಯಕ್ತಿಕ ಆರೋಪ ಮಾಡುವ ಬದಲು ದಾಖಲೆ ಹಾಗು ವಾಸ್ತವಾಂಶದ ಆಧಾರದ ಮೇಲೆ ಮಾತನಾಡಬೇಕು ಎಂದು ಆಗ್ರಹಿಸಿದರು.

ಕಾಂಗ್ರೆಸ್ ಮುಖಂಡರಾದ ಅಬ್ದುಲ್, ನೀಲಕಂಠ, ಪಟೇಲ್ ಧರ್ಮೇಶ್, ಭುವನಾಕ್ಷ ಇದ್ದರು.

## ಮಿನುಗು ಸಿನಿಮಾ ಆಡಿಯೋ ಬಿಡುಗಡೆ ನಾಳೆ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಪರಿಸರ ಸಂರಕ್ಷಣೆ ಹಾಗು ಮಕ್ಕಳ ಪ್ರತಿಭೆಯನ್ನು ಕೇಂದ್ರವಾಗಿಟ್ಟು ಕೊಂಡು ನಿರ್ಮಿಸಿರುವ ಮಿನುಗು ಚಲನಚಿತ್ರದ ಆಡಿಯೋ ಬಿಡುಗಡೆ ಸಮಾರಂಭ ಆ.30ರ ಭಾನುವಾರ ಪಟ್ಟಣದ ಅಂಬೇಡ್ಕರ್ ಭವನದಲ್ಲಿ ಜರುಗಲಿದೆ ಎಂದು ಚಲನಚಿತ್ರ ನಿರ್ದೇಶಕ ರಾಜೇಶ್ ಕೆಂಚನಹಳ್ಳಿ ಅವರು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಶುಕ್ರವಾರ ಮಾತನಾಡಿ, ಮಹಾಭುಜ ಮಾರುತಿ ಮೂವಿ ಮೇಕರ್ ಸಂಸ್ಥೆಗೆ ಸಿನಿಮಾಗೆ ಬಂಡವಾಳ ಹೂಡಿದೆ. ಮಿನುಗು ಚಿತ್ರವು ಮಕ್ಕಳ ಪ್ರತಿಭೆ, ಕುಟುಂಬ ಹಾಗು ಪರಿಸರ ಸಂರಕ್ಷಣೆಯ ಸಂದೇಶವನ್ನು ಒಳಗೊಂಡಿದ್ದು ಚನ್ನರಾಯ ಪಟ್ಟಣ, ಬೆಂಗಳೂರಿನಲ್ಲಿ ಚಿತ್ರೀಕರಣ ಮಾಡಲಾಗಿದೆ ಎಂದರು.

ಬಿ.ಶಿವಾನಂದ್ ಅವರ ಕಥೆ ಆಧರಿಸಿ ನಿರ್ಮಿಸಿರುವ 95 ನಿಮಿಷದ ಸಿನಿಮಾದಲ್ಲಿ ಚನ್ನರಾಯ ಪಟ್ಟಣದ ಬಾಲ ಕಲಾವಿದ ಧಣಿ ಪ್ರಮುಖ ಪಾತ್ರದಲ್ಲಿ ಅಭಿನಯಿಸಿದ್ದಾನೆ. ವಿ.ಮನೋಹರ್ ಸಂಗೀತ ನೀಡಿದ್ದಾರೆಂದು ಮಾಹಿತಿ ನೀಡಿದರು.

ಚಿತ್ರದಲ್ಲಿ ವಿಶಾಲ್ ರಘು, ಸದಾನಂದ ಸ್ವಾಮಿ, ಸುನೀತಾ ಶೆಟ್ಟಿ, ಮೈಕೊ ರವಿ ಸೇರಿ ಅನೇಕ ಕಲಾವಿದರು ನಟಿಸಿದ್ದಾರೆ. ಆಡಿಯೋ ಬಿಡುಗಡೆ ಸಮಾರಂಭದಲ್ಲಿ ವಿ.ಮನೋಹರ್, ಕಲಾವಿದರಾದ ನಾಗೇಶ್‌ಮಯ್ಯ, ಅಕ್ಷತಾ ಪಾಂಡವಪುರ, ಮೈಕೋ ರವಿ, ಸುನೀತಾ ಶೆಟ್ಟಿ, ವಿಶಾಲ್ ರಘು ಸೇರಿ ಅನೇಕರು ಪಾಲ್ಗೊಳ್ಳಲಿದ್ದಾರೆಂದರು.

ಭೂಮಿ ಕ್ಷೇಮಾಭಿವೃದ್ಧಿ ಸಂಘದ ಗೌರವಾಧ್ಯಕ್ಷ ಜಿ.ಎಸ್.ರಾಜ್‌ಕುಮಾರ್ ಅವರು ಮಾತನಾಡಿ, ಖ್ಯಾತ ಗಾಯಕಿ ಎಸ್.ಜಾನಕಿ ಸ್ಮರಣಾರ್ಥ ಚಲನಚಿತ್ರ ಗೀತೆಗಳ ಗಾಯನ ಸ್ಪರ್ಧೆ ಏರ್ಪಡಿಸಲಾಗಿದೆ. ಆಸಕ್ತ ಗಾಯಕರು ಸ್ಪರ್ಧೆಯಲ್ಲಿ ಪಾಲ್ಗೊಳ್ಳಬಹುದು ಎಂದರು.

ಸುರೇಶ್‌ಗೌಡ, ಸೋಮಶೇಖರ್ ಇದ್ದರು.

## ಜಾನಪದ ನಮ್ಮ ತಾಯಿ ಪರಂಪರೆ: ಶಂಭುನಾಥ ಶ್ರೀ

» ಮೊದಲನೇ ಪುಟದಿಂದ

ಪ್ರಮುಖ ಪಾತ್ರ ವಹಿಸಿದೆ ಎಂದರು.

1846ರ ಆಗಸ್ಟ್ 22ರಂದು ಅಮೇರಿಕಾದ ವಿಲಿಯಂ ಜಾನ್ ಥಾಮಸ್ ಮೊದಲ ಬಾರಿಗೆ ಫೋಕ್ ಲೋರ್ ಎಂಬ ಪದವನ್ನು ಬಳಸಿದರು. ಫೋಕ್‌ಲೋರ್ ಎಂದರೆ ಜಾನಪದ.

ಇದರ ಸ್ಮರಣಾರ್ಥವಾಗಿ ಪ್ರತಿವರ್ಷ ಆಗಸ್ಟ್ 22ರಂದು ವಿಶ್ವ ಜಾನಪದ ದಿನವನ್ನು ಆಚರಿಸಲಾಗುತ್ತದೆಂದು ತಿಳಿಸಿದರು.

ಕರ್ನಾಟಕದ ಹೆಚ್.ನಾಗೇಗೌಡ, ಹಾ.ಮಾ. ನಾಯಕ, ಖಲೀಂ ಖಾನ್, ರಾಜಶೇಖರ್ ಸೇರಿ ಹಲವು ಜಾನಪದ ವಿದ್ವಾಂಸರು ಜಾನಪದ ಲೋಕಕ್ಕೆ ತಮ್ಮದೇ ಆದ ಕೊಡುಗೆ ನೀಡಿದ್ದಾರೆ. ಅವರ ಕೆಲಸಗಳು ಭವಿಷ್ಯದ ಪೀಳಿಗೆಗೆ ಸಹಕಾರಿಯಾಗಿವೆ. ಜಾನಪದ ವಿದ್ವಾಂಸರು ಕನ್ನಡ ಸಾಹಿತ್ಯವನ್ನು ಶ್ರೀಮಂತಗೊಳಿಸಿದ್ದಾರೆ ಎಂದರು.

ಜಾನಪದದಲ್ಲಿ ಶ್ರಮಜೀವಿಗಳ ಬದುಕಿಗೆ ಸಂಬಂಧಿಸಿದ ಹಲವು ಹಾಡುಗಳು ಹುಟ್ಟಿಕೊಂಡಿವೆ. ರೈತ ಪದಗಳು, ರಾಗಿ ಬೀಸುವ ಸಂದರ್ಭದ ಹಾಡುಗಳು, ಸುಗ್ಗಿ ಗೀತೆಗಳು, ಧಾರ್ಮಿಕ ಹಾಗೂ ಆರಾಧನಾ ಗೀತೆಗಳು ಜನಮನ್ನಣೆ ಪಡೆದಿವೆ. ಸಾಮಾಜಿಕ ಜಾಲ ತಾಣಗಳೇ ಇಲ್ಲದ ಕಾಲದಲ್ಲಿ ಹುಟ್ಟಿದ ಈ ಪದಗಳನ್ನು ಇಂದಿಗೂ ನಾವು ಉಳಿಸಿಕೊಂಡು ಬರುತ್ತಿದ್ದೇವೆ ಎಂದು ಹೇಳಿದರು.

**ಶಂಭುನಾಥ ಶ್ರೀ ಕುರಿತು ಮೆಚ್ಚುಗೆ**

ಹಾಸನದ ಈ ಕಾರ್ಯಕ್ರಮಕ್ಕೆ ಆಗಮಿಸಿರುವುದು ತವರಿಗೆ ಹೆಣ್ಣು ಮಗಳು ಬಂದಾಗ ಆಗುವಂತಹ ಖುಷಿ ನೀಡಿದೆ. ಎಲ್ಲರನ್ನೂ ಸಮಾನವಾಗಿ ಕಾಣುವ ಸ್ವಾಮೀಜಿಯನ್ನು ನಾನು ಎಲ್ಲಿಯೂ ಕಂಡಿಲ್ಲ. ಈ ಹಿಂದೆ ಕಂಡ ಕೆಲವು ಕಹಿ ಅನುಭವಗಳಿಗೆ ಹೋಲಿಸಿದರೆ ಇಲ್ಲಿನ ವ್ಯವಸ್ಥೆ ಕಂಡು ತುಂಬಾ ಸಂತೋಷವಾಗಿದೆ. ದೇಶ-ವಿದೇಶಗಳಲ್ಲಿ ಹಾಡಿದ್ದರೂ ಕನ್ನಡದ ನೆಲದಲ್ಲಿ ಹಾಡಲು ಅವಕಾಶ ಸಿಕ್ಕಿರುವುದು ಹೆಮ್ಮೆಯ ವಿಚಾರ ಎಂದು ಸವಿತಕ್ಕ ಸಂತಸ ವ್ಯಕ್ತಪಡಿಸಿದರು.

ಶ್ರೀ ಕಾಲಭೈರವೇಶ್ವರ ಭಜನಾ ಮಂಡಳಿಯಿಂದ ಭಜನಾ ಕಾರ್ಯಕ್ರಮ ನಡೆಯಿತು. ವಿದ್ಯಾರ್ಥಿನಿಯರಾದ ತನಿಷಾ ಹಾಗೂ ಕಾರ್ತಿಕಾ ರಕ್ಷಾ ಬಂಧನದ ಮಹತ್ವ ತಿಳಿಸಿದರು. ಆದಿಚುಂಚನಗಿರಿ ಗೌರಿಕೊಪ್ಪಲು ಶಾಲೆಯ ವಿದ್ಯಾರ್ಥಿಗಳು ಸ್ವಾಗತ ನೃತ್ಯದ ಮೂಲಕ ರಂಜಿಸಿದರು. ಜಾನಪದ ಗಾಯಕಿ ಸವಿತಕ್ಕ ಜಾನಪದ ಗಾಯನದ ಮೂಲಕ ಸಭಿಕರ ಮನಗೆದ್ದರು.

ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷಡಾ.ಎಚ್.ಎಲ್.ಮಲ್ಲೇಶಗೌಡ, ಉದ್ಯಮಿ ಸೋಮಶೇಖರ್, ಹುಣ್ಣಿಮೆ ಕಾರ್ಯಕ್ರಮದ ಸಂಚಾಲಕ ಹೆಚ್.ಬಿ.ಮದನಗೌಡ, ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಜೆ.ಆರ್.ಕೆಂಚೇಗೌಡ, ಮಾಜಿ ಅಧ್ಯಕ್ಷ ರವಿ ನಾಕಲಗೂಡು, ಪತ್ರಕರ್ತರಾದ ಪ್ರಸನ್ನಕುಮಾರ್ (ಚಲಂ), ಬಿ.ಆರ್.ಬೊಮ್ಮೇಗೌಡ, ಬಿ.ಬಿ.ಶಿವರಾಜ್, ಶ್ರೀಮಠದ ವ್ಯವಸ್ಥಾಪಕ ಚಂದ್ರಶೇಖರ ಮತ್ತಿತರರು ಇದ್ದರು.

### ಸರ್ಕಾರ ಜಿಲ್ಲಾಧಿಕಾರಿಗೆ ನೈತಿಕ ನೀಡಬೇಕೆಂದು ಶ್ರೀಧರ ಕಲಿವೀರ ಒತ್ತಾಯ

## ಡಿಸಿ ವಿರುದ್ಧದ ರೇವಣ್ಣ ಹೇಳಿಕೆ ಖಂಡನೀಯ

• ಪ್ರಜೋದಯ ವರದಿ

**ಹಾಸನ:** ಜಿಲ್ಲಾಧಿಕಾರಿ ವಿರುದ್ಧ ಮಾಜಿ ಸಚಿವ ಹೆಚ್.ಡಿ.ರೇವಣ್ಣ ಅವರು ಅವಮಾನಕಾರಿ ಹಾಗು ಬೆದರಿಕೆ ರೀತಿಯ ಹೇಳಿಕೆ ನೀಡಿರುವುದು ಖಂಡನೀಯ. ರಾಜ್ಯ ಸರ್ಕಾರ ಜಿಲ್ಲಾಧಿಕಾರಿಗೆ ನೈತಿಕ ಮತ್ತು ಕಾನೂನಾತ್ಮಕ ಬೆಂಬಲ ನೀಡಬೇಕೆಂದು ಅಂಬೇಡ್ಕರ್ ದಲಿತ ಸಂಘರ್ಷ ಸಮಿತಿ ಮತ್ತು ದಲಿತ ಸಂಘಟನೆಗಳ ಒಕ್ಕೂಟದ ಸಂಸ್ಥಾಪಕ ರಾಜ್ಯಾಧ್ಯಕ್ಷ ಶ್ರೀಧರ ಕಲಿವೀರ ಅವರು ಒತ್ತಾಯಿಸಿದರು.

ಶುಕ್ರವಾರ ನಗರದ ಖಾಸಗಿ ಹೋಟೆಲ್‌ನಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜನಪ್ರತಿನಿಧಿಯಾರುವ ಹೆಚ್.ಡಿ.ರೇವಣ್ಣ ಅವರು ಜಿಲ್ಲಾಧಿಕಾರಿ ಬಗ್ಗೆ ಕೇವಲವಾಗಿ ಮಾತನಾಡಿರುವುದು ಸರಿಯಲ್ಲ. ಜಿಲ್ಲಾಧಿಕಾರಿ ವಿರುದ್ಧ ಸ್ಪೀಕರ್ ಹಾಗು ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಗೆ ದೂರು ನೀಡುವುದಾಗಿ ರೇವಣ್ಣ ಅವರ ಹೇಳಿಕೆ ಒತ್ತಡ ಹೇರುವ ಪ್ರಯತ್ನ, ಈ ಕುರಿತು ಸಂಬಂಧಪಟ್ಟ ರಾಷ್ಟ್ರೀಯ ಆಯೋಗಗಳಿಗೆ ದೂರು ಸಲ್ಲಿಸುವುದಾಗಿ ತಿಳಿಸಿದರು.

ಜಿಲ್ಲಾಧಿಕಾರಿ ಸಮರ್ಥ ಹಾಗು ಬದ್ಧತೆಯುಳ್ಳ ಅಧಿಕಾರಿಯಾಗಿದ್ದು, ಅವರಿಗೆ ರಾಜ್ಯ ಸರ್ಕಾರ ನೈತಿಕ ಬೆಂಬಲ ನೀಡಬೇಕು. ಅಧಿಕಾರಿ ವಿರುದ್ಧ ಅವಮಾನಕಾರಿ ಹಾಗು ಬೆದರಿಕೆ ರೀತಿಯ ಹೇಳಿಕೆ ನೀಡಿರುವ ಆರೋಪ ಹಿನ್ನಲೆ ಹೆಚ್.ಡಿ.ರೇವಣ್ಣ ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದ ಅವರು, ಜಿಲ್ಲಾಧಿಕಾರಿ ಅವರು ಬರ ಪರಿಹಾರ ಸಮೀಕ್ಷೆ ಸೇರಿ ವಿವಿಧ ಆಡಳಿತಾತ್ಮಕ ಕಾರ್ಯಗಳನ್ನು ಸಮರ್ಥವಾಗಿ ನಿರ್ವಹಿಸಿದ್ದಾರೆ. ಬಡವರು, ಪರಿಶಿಷ್ಟ ಜಾತಿ, ಪಂಗಡ ಸೇರಿ ಎಲ್ಲಾ ವರ್ಗದ ಜನರ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸಮಸ್ಯೆಗಳಿಗೆ ಸ್ಪಂದಿಸುತ್ತಿದ್ದಾರೆಂದು ಸಮರ್ಥಿಸಿಕೊಂಡರು.



ಜಿಲ್ಲೆಯಲ್ಲಿ ಮನೆ, ವಸತಿ ಅಥವಾ ಕೃಷಿ ಭೂಮಿ ಇಲ್ಲದ ಅರ್ಹ ಫಲಾನುಭವಿಗಳಿಗೆ ಸರ್ಕಾರ ದಿಂದ ಮನೆ ಹಾಗೂ ಭೂಮಿ ಮಂಜೂರು ಮಾಡಬೇಕು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಮೇಲೆ ದೌರ್ಜನ್ಯ ನಡೆಯದಂತೆ ಕಠಿಣ ಕ್ರಮ ಕೈಗೊಳ್ಳಬೇಕು. ಪೊಲೀಸ್ ಠಾಣೆಗಳಲ್ಲಿ ಎಸ್‌ಸಿ-ಎಸ್‌ಟಿ ದೌರ್ಜನ್ಯ ತಡೆ ಕಾಯ್ದೆ ಪರಿಣಾಮಕಾರಿಯಾಗಿ ಜಾರಿಗೊಳಿಸಬೇಕೆಂದು ಸರ್ಕಾರವನ್ನು ಒತ್ತಾಯಿಸಿದರು.

ಡಾ.ಬಿ.ಆರ್.ಅಂಬೇಡ್ಕರ್ ಅವರು 1954ರಲ್ಲಿ ಹಾಸನಕ್ಕೆ ಭೇಟಿ ನೀಡಿದ ಹಿನ್ನಲೆ ನಿರ್ಮಿಸಲು ಉದ್ದೇಶಿಸಿರುವ ಅಂಬೇಡ್ಕರ್ ಮತ್ತು ನಾಲ್ವಡಿ ಕೃಷ್ಣರಾಜ ಒಡೆಯರ್ ಸ್ಮಾರಕ, ವಸ್ತು ಸಂಗ್ರಹಾಲಯ ಹಾಗು ಸಂಶೋಧನಾ ಕೇಂದ್ರಕ್ಕೆ ಹೆಚ್ಚುವರಿಯಾಗಿ 20 ಕೋಟಿ ರೂ. ಅನುದಾನ ನೀಡ ಬೇಕು. ಸ್ಮಾರಕದ ಆವರಣದಲ್ಲಿ ಕೌಶಲ್ಯಾಭಿವೃದ್ಧಿ ಕೇಂದ್ರ, ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ತರಬೇತಿ ನೀಡಲು ಉದ್ದೇಶಿಸಲಾಗಿದೆ. ಆದ್ದರಿಂದ ಸರ್ಕಾರ ಹೆಚ್ಚುವರಿ ಅನುದಾನ ಬಿಡುಗಡೆ ಮಾಡುವಂತೆ ಆಗ್ರಹಿಸಿದರು.

ಮುಖಂಡರಾದ ಎಂ.ಸೋಮಶೇಖರ್, ಸಿರಿಗೆರೆ ತಿಪ್ಪೇಸ್ವಾಮಿ, ನಾರಾಯಣದಾಸ್, ಕೆ.ಈರಪ್ಪ, ಅರೇಹಳ್ಳಿ ನಿಂಗರಾಜು, ಜಗದೀಶ್ ಚೌಡಹಳ್ಳಿ, ಸತೀಶ್, ಗೋವಿಂದರಾಜು, ಬಾಬು ನಾಯಕ, ವಿಜಯ ಕುಮಾರ್ ಬಾಗೇವಾಳು, ಹರೀಶ್ ಉಳುವಾರೆ, ವಳಲಹಳ್ಳಿ ವಿರೇಶ್, ನಾಗರಾಜು ಹೆತ್ತೂರು, ಬಸವರಾಜು ಬೆಳಗೋಡು, ಅಂಬುಗ ಮಲ್ಲೇಶ್, ಕಲ್ಪನಾಕೀರ್ತಿ, ಶಿವಮ್ಮ ಮತ್ತಿತರರು ಹಾಜರಿದ್ದರು.

## ಗೂಡ್ಸ್ ವಾಹನ ಡಿಕ್ಕಿ: ವ್ಯಕ್ತಿ ಸಾವು

• ಪ್ರಜೋದಯ ವರದಿ

**ಸಕಲೇಶಪುರ:** ಗೂಡ್ಸ್ ವಾಹನ ಡಿಕ್ಕಿಯಾಗಿ ಕಾರಿನಲ್ಲಿದ್ದ ವ್ಯಕ್ತಿ ಮೃತಪಟ್ಟು ಮತ್ತೊಬ್ಬ ಗಂಭೀರ ಗಾಯಗೊಂಡಿರುವ ಘಟನೆ ತಾಲ್ಲೂಕಿನ ರಾಷ್ಟ್ರೀಯ ಹೆದ್ದಾರಿ 75ರಲ್ಲಿ ಗುರುವಾರ ನಡೆದಿದೆ.

ದಕ್ಷಿಣ ಕನ್ನಡ ಜಿಲ್ಲೆ ಸುಳ್ಯ ಗ್ರಾಮದ ಕಿಶನ್ ಮೃತರು. ಸೈನಿಕ ಎಸ್.ಎನ್.ಹರ್ಷಿತ್ ಗಾಯಾಳು. ರಜೆ ಹಿನ್ನಲೆಯಲ್ಲಿ ಊರಿಗೆ ಬಂದಿರುವ ಹರ್ಷಿತ್ ಗ್ರಾಮದಲ್ಲಿ ಮನೆ ನಿರ್ಮಾಣ ಮಾಡುತ್ತಿದ್ದು ಟೈಲ್ಸ್ ತರಲೆಂದು ಆ.25ರಂದು ಹಾಸನಕ್ಕೆ ಬಂದಿದ್ದರು. ಕೆಲಸ ಮುಗಿಸಿ ವಾಪಾಸ್ ಹೋಗುತ್ತಿದ್ದಾಗ ಮಂಗಳೂರು ಕಡೆಯಿಂದ ವೇಗವಾಗಿ ಬಂದ ಗೂಡ್ಸ್ ವಾಹನ ಡಿಕ್ಕಿಯಾಗಿ ಕಾರು ಪಲ್ಟಿಯಾಗಿದೆ. ಅಪಘಾತದಲ್ಲಿ ಗಂಭೀರ ಗಾಯಗೊಂಡಿದ್ದ ಇಬ್ಬರನ್ನೂ ಮಂಗಳೂರಿನ ಎ.ಜೆ.ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಚಿಕಿತ್ಸೆ ಫಲಿಸದೆ ಕಿಶನ್ ಮೃತ ಪಟ್ಟಿದ್ದಾರೆ. ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019

CMYK CMYK CMYK CMYK